ಸಂಪುಟ : 11 ಸಂಚಿಕೆ: 04 ಪುಟ : 4+2 ಬೆಲೆ: 3.00 ಗುರುವಾರ ಜನವರಿ 29 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 04 Pages : 4+2 Price : 3.00 Thursday January 29 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಹುಲಕೋಟಿಯ ಶ್ರೀ ಕೈಲಾಸ ಆಶ್ರಮದ 34ನೇ ವಾರ್ಷಿಕೋತ್ಸವ ಸಮಾರಂಭದಲ್ಲಿ ಸ್ವಾಮಿ ನಿರ್ಭಯಾನಂದ ಸ್ವಾಮೀಜಿ

# ಪ್ರತಿಯೊಬ್ಬ ಮನುಷ್ಯನೂ ಮೊದಲು ತಪಸ್ವಿಯಾಗಬೇಕು



**■ವಿಜಯಸಾಕ್ಷಿ ಸುದ್ದಿ, ಗದಗ**

ಸನ್ಯಾಸತ್ವಕ್ಕೆ ಪ್ರಮುಖವಾಗಿ ಬೇಕಾದುದು ಪರಮ ವೈರಾಗ್ಯ. ಪ್ರತಿಯೊಬ್ಬ ಮನುಷ್ಯನು ಮೊದಲು ತಪಸ್ವಿಯಾಗಬೇಕು. ತಪಸ್ಸಿನಿಂದ ಗಳಿಸಿದ ಜ್ಞಾನ ಮತ್ತು ಆನಂದವನ್ನು ಇತರರಿಗೆ ಹಂಚುವ ಗುಣ ಬೆಳೆಸಿಕೊಳ್ಳಬೇಕು. ಶ್ರೀ ರಾಮಕೃಷ್ಣ ಪರಮಹಂಸರು ತಾವು ಮಾಡಿದ ಸುದೀರ್ಘ ತಪಸ್ಸಿನ ಫಲವನ್ನು ಸ್ವಾಮಿ ವಿವೇಕಾನಂದರಿಗೆ ಧಾರೆಯೆರೆದರು. ಆ ಮೂಲಕ ವಿವೇಕಾನಂದರು ಜಗತ್ತಿಗೆ ಬೆಳಕಾದರು ಎಂದು ಗದಗ–ವಿಜಯಪುರದ ರಾಮಕೃಷ್ಣ ವಿವೇಕಾನಂದಾಶ್ರಮದ ಸ್ವಾಮಿ ನಿರ್ಭಯಾನಂದ ಸ್ವಾಮೀಜಿ ಹೇಳಿದರು.

ಬುಧವಾರ ತಾಲೂಕಿನ ಹುಲಕೋಟಿ ಗ್ರಾಮದ ಶ್ರೀ ಕೈಲಾಸ ಆಶ್ರಮದ 34ನೇ ವಾರ್ಷಿಕೋತ್ಸವದ ಸಮ್ಮುಖ ವಹಿಸಿ ಮಾತನಾಡಿದ ಅವರು, ಭಾರತೀಯ ಸನ್ಯಾಸತ್ವದ ಇತಿಹಾಸವು ಮಹರ್ಷಿ ಯಾಜ್ಞವಲ್ಕ್ಯರಿಂದ ಆರಂಭವಾಯಿತು. ಯಾಜ್ಞವಲ್ಕ್ಯ, ಬುದ್ಧ ಹಾಗೂ ಶಂಕರಾಚಾರ್ಯರು ಈ ಪರಂಪರೆಯನ್ನು ವಿಶ್ವಕ್ಕೆ ಪರಿಚಯಿಸಿದರು ಎಂದರು.

> ಶಿರಹಟ್ಟಿ ಫಕೀರ ಸ್ವಾಮಿಗಳು ಮಠ–ಮಸೀದಿಗಳ ಮೂಲಕ ಭಾವೈಕ್ಯತೆಯ ಸಂದೇಶ ಪಸರಿಸಿದ್ದಾರೆ. ಇಂತಹ ಕಾರಣಗಳಿಂದಲೇ ಭಾರತವು ಆಧ್ಯಾತ್ಮಿಕ ಲೋಕದ ಕೊಂಡಿಯಾಗಿದೆ.
> **– ಶ್ರೀ ಫಕೀರೇಶ್ವರ ಸ್ವಾಮೀಜಿ.**

> ದೇವರಿಗಿಂತ ಗುರು ದೊಡ್ಡವನು. ನೆಲ ಕ್ಷೇತ್ರವಾಗಬೇಕಾದರೆ, ಜಲ ತೀರ್ಥವಾಗಬೇಕಾದರೆ, ಪದಾರ್ಥ ಪ್ರಸಾದವಾಗಬೇಕಾದರೆ ಅದಕ್ಕೆ ತಿರುಚ್ಚಿ ಶ್ರೀಗಳಂಥ ಗುರುಗಳ ಪಾದಸ್ಪರ್ಶ ಅವಶ್ಯ. ಹೀಗಾಗಿ ದೇವರಿಂದ ಮನುಷ್ಯನ ಕಲ್ಯಾಣ ಸಾಧ್ಯವಿಲ್ಲ. ದೇವರು ನರರೂಪದಲ್ಲಿ ಬಂದು ಗುರುವಾಗಿ ಮಾರ್ಗದರ್ಶನ ಮಾಡಿದಾಗ ಮಾತ್ರವೇ ಮನುಷ್ಯನ ಕಲ್ಯಾಣ ಸಾಧ್ಯ.
> **– ಡಾ. ನೀಲಮ್ಮತಾಯಿ.**

ಹೊಸಳ್ಳಿ ಬೂದೀಶ್ವರ ಸಂಸ್ಥಾನಮಠದ ಅಭಿನವ ಬೂದೀಶ್ವರ ಸ್ವಾಮೀಜಿ ಮಾತನಾಡಿ, ಗುರು ಆದವನು ಜಾತಿ–ಮತ–ಪಂಥ ನೋಡದೇ, ಬಯಸಿ ಬಂದ ಭಕ್ತನ ಮಸ್ತಕದ ಮೇಲೆ ಹಸ್ತ ಇಟ್ಟು ಮಾರ್ಗದರ್ಶನ ಮಾಡಬೇಕು. ಎಲ್ಲರನ್ನು ಪ್ರೀತಿಸಬೇಕು, ಉಪದೇಶ ನೀಡಬೇಕು. ಅದೇ ಶರಣರು ಪ್ರತಿಪಾದಿಸಿದ ಧರ್ಮ. ಅಂಥಹ ಬಸವಾದಿ ಶಿವಶರಣರ ಪರಂಪರೆಯಲ್ಲಿ ಬೂದೀಶ್ವರ ಮಠ ಬೆಳೆದುಬಂದಿದೆ ಎಂದರು.



ದೇವರಿಗೆ ದೀಪ ಬೆಳಗುವುದು ಎಷ್ಟು ಮುಖ್ಯವೋ, ಹಸಿದು ಬಂದವರಿಗೆ ಅನ್ನ ನೀಡುವುದು ಅಷ್ಟೇ ಮುಖ್ಯ. ಆ ಕಾರಣಕ್ಕಾಗಿಯೇ ಶರಣ ಪರಂಪರೆಯಲ್ಲಿ ಕಾಯಕ ಮತ್ತು ದಾಸೋಹಕ್ಕೆ ವಿಶೇಷ ಮಹತ್ವ ನೀಡಲಾಗಿದೆ. ಪ್ರತಿಯೊಂದು ಕಾಯಕದ ಶ್ರೇಷ್ಠತೆಯನ್ನು ಎತ್ತಿ ಹಿಡಿಯಲಾಗಿದೆ ಎಂದರು.

ಅಣ್ಣಿಗೇರಿಯ ಡಾ. ಶಿವಕುಮಾರ ಸ್ವಾಮೀಜಿ ಮಾತನಾಡಿ, ಜಗತ್ತಿನ ಅಜ್ಞಾನ ಕಳೆಯಲು ಜಗದ್ಗುರು ಸಿದ್ದಾರೂಢರ ಪರಂಪರೆ ಅವತರಿಸಿದೆ. 14 ಭಾಷೆಗಳ ಜ್ಞಾನ ಹೊಂದಿದ್ದ ಸಿದ್ದಾರೂಢರು ದೇಶದುದ್ದಕ್ಕೂ ಸಂಚರಿಸಿ ಆಧ್ಯಾತ್ಮದ ಬೀಜ ಬಿತ್ತಿದರು. ಅವರ ಶಿಷ್ಯ ಪರಂಪರೆಯೇ ಇಂದು ಸಮಾಜವನ್ನು ಮುನ್ನಡೆಸುತ್ತಿದೆ ಎಂದರು.

ಶ್ರೀ ಕೈಲಾಸ ಆಶ್ರಮದ ಪೀಠಾಧಿಪತಿ ಶ್ರೀ ಜಯೇಂದ್ರಪುರಿ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ವೇದಿಕೆಯಲ್ಲಿ ಚಿಕೇನಕೊಪ್ಪದ ಶಿವಶಾಂತವೀರ ಶರಣರು, ಅಧ್ಯಾತ್ಮ ವಿದ್ಯಾಶ್ರಮದ ಡಾ. ನೀಲಮ್ಮತಾಯಿ, ಬ್ರಹ್ಮಕುಮಾರಿ ಜಯಂತಿ ಅಕ್ಕನವರು ಉಪಸ್ಥಿತರಿದ್ದರು.

### ಯಲಿಶಿರುಂದ ಕ್ಲಸ್ಟರ್ ಮಟ್ಟದ ಎಫ್‌ಎಲ್‌ಎನ್ ಕಲಿಕಾ ಹಬ್ಬದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ

# ಮಕ್ಕಳ ಕಲಿಕಾಭಿವೃದ್ಧಿಯಲ್ಲಿ ತಾಯಂದಿರ ಪಾತ್ರ ಹಿರಿದು



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಮಕ್ಕಳ ಕಲಿಕಾಭಿವೃದ್ಧಿಯಲ್ಲಿ ಮಹಿಳೆಯರ ಪಾತ್ರ ಹಿರಿದು ಎಂದು ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿ ಹೇಳಿದರು.

ಅವರು ಪಟ್ಟಣ ಸಮಿಪದ ಶಿರೂಳ ಗ್ರಾಮದ ಸರಕಾರಿ ಪ್ರಾಥಮಿಕ ಶಾಲೆಯಲ್ಲಿ ಯಲಿಶಿರುಂದ ಕ್ಲಸ್ಟರ್ ಮಟ್ಟದ ಎಫ್‌ಎಲ್‌ಎನ್ ಕಲಿಕಾ ಹಬ್ಬ ಉದ್ಘಾಟಿಸಿ ಮಾತನಾಡಿ, ಮಕ್ಕಳ ಕಲಿಕೆಯಲ್ಲಿ ಸಾಧನೆಗೈಯಲು ತಾಯಂದಿರ ಪಾತ್ರ ಮಹತ್ವದ್ದಾಗಿದ್ದು, ಮಕ್ಕಳು ಶಾಲೆಯಲ್ಲಿ ಕಲಿತ ವಿಷಯಗಳನ್ನು ನಿತ್ಯ ಮಕ್ಕಳ ಜೊತೆ ಚರ್ಚಿಸಿ, ಗುರುಗಳ ಜೊತೆ ಹಂಚಿಕೊಂಡಲ್ಲಿ ಮಕ್ಕಳು ಶೀಘ್ರವಾಗಿ ಕಲಿಕೆಯಲ್ಲಿ ಅಭಿವೃದ್ಧಿಹೊಂದಲು ಸಾಧ್ಯವಾಗುತ್ತದೆ ಎಂದರು.

ಸಿ.ಬಿ. ದೊಡ್ಡಗೌಡ್ರ ಮಾತನಾಡಿ ನಾನು ಈ ಶಾಲೆಯಲ್ಲೇ ಪ್ರಾಥಮಿಕ ಶಿಕ್ಷಣ ಮುಗಿಸಿದ್ದು ಹೆಮ್ಮೆಯೆನ್ನಿಸುತ್ತದೆ. ಗದಗ ಗ್ರಾಮೀಣ ಕ್ಷೇತ್ರ ಶಿಕ್ಷಣಾಧಿಕಾರಿ ವಿ.ವಿ. ನಡುವಿನಮನಿಯವರ ಕಾರ್ಯ ನಿಜಕ್ಕೂ ಮೆಚ್ಚುವಂಥದ್ದು. ನಮ್ಮ ಹೆಮ್ಮೆಯ ಶಾಲೆ ಅಭಿವೃದ್ಧಿಗೆ ನನ್ನ ಸಹಾಯ–ಸಹಕಾರ ಇರುತ್ತದೆ ಎಂದರು.


> ಗದಗ ಜಿಲ್ಲಾ ಪ್ರಾಥಮಿಕ ಶಿಕ್ಷಕರ ಸಂಘದ ಅಧ್ಯಕ್ಷ ವಿ.ಎಂ. ಹಿರೇಮಠ ಮಾತನಾಡಿ, ಶಾಲೆಗಳ ಅಭಿವೃದ್ಧಿಗೆ ಗ್ರಾಮದ ಎಲ್ಲರೂ ಕೈಜೋಡಿಸಿದ್ದೀರಿ. ಸರಕಾರಿ ಶಾಲೆಯ ಶಿಕ್ಷಕರು ನುರಿತ ತರಬೇತುದಾರರಿಂದ ತರಬೇತಿ ಪಡೆದಿರುತ್ತಾರೆ. ಖಾಸಗಿ ಶಾಲೆಯ ವ್ಯಾಮೋಹ ಬಿಟ್ಟು ಊರಿನಲ್ಲಿರುವ ಸರಕಾರಿ ಶಾಲೆಗಳಿಗೆ ಮಕ್ಕಳನ್ನು ಸೇರಿಸಿ ಎಂದರು.

ವಾಯ್.ಬಿ. ಕಲ್ಯಾಣಮಠ ಮಾತನಾಡಿ, ಸರಕಾರಿ ಶಾಲೆಗಳು ನಮ್ಮ ನಾಡಿನ ಪರಂಪರೆಯನ್ನು ಉಳಿಸಿ ಬೆಳೆಸುವುದರ ಜೊತೆಯಲ್ಲಿ ಮಾತೃಭಾಷೆಯನ್ನು ಕಲಿಸುವ ಮೂಲಕ ನಮ್ಮೆಲ್ಲರ ಬದುಕು ಹಸನಾಗಿಸುತ್ತಿರುವುದರಿಂದ ಸರಕಾರಿ ಶಾಲೆಯ ಅಭಿವೃದ್ಧಿಗೆ ಸಹಕರಿಸಿ ಎಂದರು.

ಅಧ್ಯಕ್ಷತೆಯನ್ನು ಎಸ್‌ಡಿಎಂಸಿ ಅಧ್ಯಕ್ಷ ಫಕ್ಕೀರಯ್ಯ ಹಿರೇಮಠ ವಹಿಸಿದ್ದರು. ಪಿಡಿಓ ಶಿವಕುಮಾರ ವಾಲಿ, ಗ್ರಾ.ಪಂ ಅಧ್ಯಕ್ಷ ಪರಶುರಾಮ ಹೂಗಾರ, ಶಂಕರ ಹಡಗಲಿ, ವಿ.ಸಿ. ನರೇಗಲ್ಲಮಠ, ಪಾಂಡಪ್ಪ ರಾಮಗೇರಿ, ಪ್ರ.ಗು. ಶಿವಲಿಂಗಯ್ಯ ಕಾತ್ರಾಳ, ಎಂ.ವಿ. ಪಾಟೀಲ, ಸಿಆರ್‌ಪಿ ಸುವರ್ಣಾ ಚವಡಿ, ಬೋಜರಾಜ ಹಡಪದ, ಬಿ.ಎಸ್. ಮಾಡಳ್ಳಿ, ಎಂ.ಎಂ. ನಿಂಬನಾಯ್ಕರ್, ಶರಣಪ್ಪ ಡೋಣಿ, ಜಿ.ಡಿ. ಮುಳಗುಂದ, ಪರಮೇಶಪ್ಪ ರಾಮಗೇರಿ, ಮಲಕರೆಡ್ಡಿ, ಕಲ್ಲನಗೌಡ್ರ ಗುರಪ್ಪಗೌಡ್ರ ಎಸ್.ವಿ. ಪಾಟೀಲ ಇದ್ದರು.

## ಗ್ರಾಮೀಣ ಉದ್ಯೋಗ ಯೋಜನೆಗೆ ಸಂಕಷ್ಟ

**■ವಿಜಯಸಾಕ್ಷಿ ಸುದ್ದಿ, ಡಂಬಳ**



ಕೂಲಿ ಕಾರ್ಮಿಕರ ಹಿತ ಕಾಯುವ ಮಹಾತ್ಮ ಗಾಂಧಿ ರೋಜಗಾರ ಕಾಯ್ದೆಯ ಹಕ್ಕುಸ್ವರೂಪವನ್ನು ತೆಗೆದುಹಾಕಿ ಕೇವಲ ಸರ್ಕಾರದ ಅಣತಿಯ ಯೋಜನೆಯಾಗಿ ಜಿ ರಾಮ್ ಜಿ ಯೋಜನೆಯನ್ನು ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ ಜಾರಿಗೆ ತಂದಿದೆ ಎಂದು ರೋಣ ಗ್ಯಾರಂಟಿ ಸಮಿತಿ ಅಧ್ಯಕ್ಷ ಮಿಥುನ ಜಿ.ಪಾಟೀಲ (ಸಂಗನಗೌಡ) ಆರೋಪಿಸಿದರು.

ಡಂಬಳ ಗ್ರಾಮದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಅಂದಿನ ಪ್ರಧಾನಿ ಮನಮೋಹನ್ ಸಿಂಗ್ ನೇತೃತ್ವದ ಸರ್ಕಾರ ರೈತರ, ಕೂಲಿಕಾರ್ಮಿಕರ, ಮಹಿಳೆಯರು ಮತ್ತು ಪುರುಷರಿಗೆ ಒಂದೇ ವೇತನ ಜಾರಿಗೆ ಮಾಡಿ ಆರ್ಥಿಕವಾಗಿ ಉತ್ತಮ ಬದುಕು ಕಟ್ಟಿಕೊಳ್ಳುವಂತಾಗಬೇಕು ಎನ್ನುವ ಹಿನ್ನೆಲೆಯಲ್ಲಿ ಉದ್ಯೋಗ ಖಾತ್ರಿ ಕಾಯ್ದೆ ಜಾರಿಗೊಳಿಸಿತ್ತು. ಮಹಾತ್ಮ ಗಾಂಧಿ ರೋಜಗಾರ ಯೋಜನೆಯ ಕಾಯ್ದೆ ಗ್ರಾಮೀಣ ಭಾಗದ ಕೃಷಿ ಕೂಲಿಕಾರರು, ಬಡ ರೈತರು ಹಾಗೂ ಇನ್ನಿತರೆ ಗ್ರಾಮೀಣ ದುಡಿಮೆಗಾರರಲ್ಲಿ ಬಹು ದೊಡ್ಡ ಆಶಾಕಿರಣವಾಗಿತ್ತು.

ಆದರೆ ಬಿಜೆಪಿ ನೇತೃತ್ವದ ಪ್ರಧಾನಿ ನರೇಂದ್ರ ಮೋದಿಯವರ ಕೇಂದ್ರ ಸರ್ಕಾರ ಮನರೇಗಾ ಕಾಯ್ದೆ ಹಾಗೂ ಹಕ್ಕು ಸ್ವರೂಪವನ್ನು ತೆಗೆದುಹಾಕಿ ಕೇವಲ ಸರ್ಕಾರದ ಅಣತಿಯ ಯೋಜನೆಯಾಗಿ ಹೊಸದಾಗಿ ವಿಕಸಿತ ಭಾರತ ರೋಜಗಾರ್ ಆಜೀವಿಕ ಮಿಷನ್ ಗ್ರಾಮೀಣ ಖಾತರಿ (ವಿ.ಬಿ.ಜಿ. ರಾಮ್ ಜಿ) ಕಾಯ್ದೆಯನ್ನು ಜಾರಿಗೊಳಿಸಿದೆ. ಈ ಹೊಸ ಕಾಯ್ದೆಯಿಂದ ಕೂಲಿಕಾರ ಕಾರ್ಮಿಕರ ಮೇಲೆ ಹಲವು ದುಷ್ಪರಿಣಾಮಗಳು ಬೀರುತ್ತವೆ. 125 ದಿನಗಳ ಕೆಲಸ ಸಿಗುವುದಿಲ್ಲ ಮತ್ತು ಕೆಲಸದಿಂದ ವಂಚಿತರಾಗುತ್ತಾರೆ. ಕೇಂದ್ರ ಸರ್ಕಾರ ದೇಶದ ಎಲ್ಲಾ ರಾಜ್ಯಗಳಲ್ಲಿ ಶೇ. 60ರಷ್ಟು, ರಾಜ್ಯ ಸರ್ಕಾರ ಶೇ. 40ರಷ್ಟು ಮೊತ್ತವನ್ನು ಖರ್ಚು ಮಾಡಬೇಕೆಂಬ ಅಂಶಗಳಿಂದ ಕಾರ್ಮಿಕರನ್ನು ಕೂಲಿಯಿಂದ ವಂಚಿತರಾಗಿ ಮಾಡುವ ಹುನ್ನಾರವಾಗಿದೆ ಎಂದು ಆರೋಪಿಸಿದರು.

## ಜ. 30ರಿಂದ ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನ



**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮದಡಿಯಲ್ಲಿ ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನದ ಪಾಕ್ಷಿಕ ಆಚರಣೆ ಕುರಿತು ಜಿಲ್ಲಾ ಸಮನ್ವಯ ಸಮಿತಿ ಸಭೆಯು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಧ್ಯಕ್ಷತೆಯಲ್ಲಿ ಜರುಗಿತು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನವು ಜನವರಿ 30ರಿಂದ ಫೆಬ್ರವರಿ 13ರವರೆಗೆ ಜರುಗಲಿದ್ದು, ಅಭಿಯಾನವನ್ನು ವಿವಿಧ ಇಲಾಖೆಗಳ ಸಮನ್ವಯತೆಯೊಂದಿಗೆ ಯಶಸ್ವಿಗೊಳಿಸಬೇಕೆಂದು ತಿಳಿಸಿದರು.

ಡಾ. ರಾಜೇಂದ್ರ ಬಸರಿಗಿಡದ ಮಾತನಾಡಿ, ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮದಡಿ ಜಿಲ್ಲಾದ್ಯಂತ ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನವನ್ನು ಜ. 30ರಿಂದ ಫೆಬ್ರವರಿ 13ರವರೆಗೆ ಹಮ್ಮಿಕೊಳ್ಳಲಾಗುತ್ತಿದೆ. ಕುಷ್ಠರೋಗವು ಮೈಕ್ರೋ ಬ್ಯಾಕ್ಟಿರಿಯಂ ಲೆಪ್ರೆ ಎಂಬ ಸೂಕ್ಷ್ಮಾಣುವಿನಿಂದ ಬರುವ ಕಾಯಿಲೆಯಾಗಿದೆ. ಕುಷ್ಠರೋಗವನ್ನು ಎಂ.ಡಿ.ಟಿ ಚಿಕಿತ್ಸೆಯಿಂದ ಸಂಪೂರ್ಣವಾಗಿ ಗುಣಪಡಿಸಬಹುದಾಗಿದೆ. ಎಂ.ಡಿ.ಟಿ ಚಿಕಿತ್ಸೆಯು ಎಲ್ಲ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಕುಷ್ಠರೋಗ ಆಸ್ಪತ್ರೆಗಳಲ್ಲಿ ಉಚಿತವಾಗಿ ದೊರೆಯುತ್ತದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಸ್ಪರ್ಶ ಕುಷ್ಠರೋಗ ಜಾಗೃತಿ ಅಭಿಯಾನ ಹಾಗೂ ಕುಷ್ಠರೋಗ ನಿರ್ಮೂಲನೆ ಕುರಿತು ಕರಪತ್ರ ಹಾಗೂ ಭಿತ್ತಿಪತ್ರಗಳನ್ನು ಬಿಡುಗಡೆ ಮಾಡಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಸಮೀಕ್ಷಣಾಧಿಕಾರಿ ಡಾ. ವೆಂಕಟೇಶ ರಾಥೋಡ, ಜಿಲ್ಲಾ ಆರ್.ಸಿ.ಎಚ್ ಅಧಿಕಾರಿ ಡಾ. ಮೀನಾಕ್ಷಿ, ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ. ವೈ. ಕೆ. ಭಜಂತ್ರಿ, ಎಪಿಡೋಮಾಲಾಜಿಸ್ಟ್ ಪ್ರವೀಣ ನಿಡಗುಂದಿ, ಡಾ. ಎಚ್. ಎಲ್. ಗಿರಡ್ಡಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ರೂಪಸೇನ ಚವ್ಹಾಣ ಸೇರಿದಂತೆ ಇತರರು ಹಾಜರಿದ್ದರು.

# ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

2025–26ನೇ ಸಾಲಿಗೆ ಬೆಂಗಳೂರಿನಲ್ಲಿ ಆಶೀರ್ವಾದ ಪ್ರೈಪ್ಸ್ ಪ್ರೈವೇಟ್ ಲಿಮಿಟೆಡ್ ಸಂಸ್ಥೆಯವರ ಸಹಯೋಗದೊಂದಿಗೆ ವೃತ್ತಿ ಆಧಾರಿತ ಕೌಶಲ್ಯ ತರಬೇತಿ ಪಡೆಯಲು ಅರ್ಹ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಜನವರಿ 31 ಕೊನೆಯ ದಿನವಾಗಿದೆ. ಅರ್ಜಿಗಳನ್ನು ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಗದಗ ಸಲ್ಲಿಸಬಹುದಾಗಿದೆ.

ವಿದ್ಯಾರ್ಥಿಯು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು.

ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿದವರಾಗಿರಬೇಕು (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ). ವಿದ್ಯಾರ್ಹತೆ: 8ನೇ ತರಗತಿ, ಎಸ್.ಎಸ್.ಎಲ್.ಸಿ, ಐ.ಟಿ.ಐ, ಡಿಪ್ಲೋಮಾ, ಪಿ.ಯು.ಸಿ. ಉತ್ತೀರ್ಣರಾದ ಮತ್ತು ಪದವಿ ಉತ್ತೀರ್ಣರಾದ ಅಥವಾ ಅನುತ್ತೀರ್ಣರಾದ ಅಭ್ಯರ್ಥಿಗಳು. ವಿದ್ಯಾರ್ಥಿಯ ವಯೋಮಿತಿ: ಕನಿಷ್ಠ 18 ಹಾಗೂ ಗರಿಷ್ಠ 35 ವರ್ಷಗಳ ವಯೋಮಿತಿಯನ್ನು ನಿಗದಿ ಪಡಿಸಲಾಗಿದೆ.

(ಅರ್ಜಿ ಸಲ್ಲಿಸುವ ಅಂತಿಮ ದಿನಾಂಕದೊಳಗೆ) ಕೇಂದ್ರ ಮತ್ತು ರಾಜ್ಯ ಸರ್ಕಾರದ ನೌಕರಿಯಲ್ಲಿರುವ ಅಭ್ಯರ್ಥಿಗಳು ಅರ್ಹರಿರುವುದಿಲ್ಲ. ಉಚಿತ ಊಟ ಮತ್ತು ಹಾಸ್ಟೆಲ್ ಸೌಲಭ್ಯವಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ಜಿಲ್ಲಾ ಕಚೇರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಗೂ ಅಲ್ಪಸಂಖ್ಯಾತರ ಸಹಾಯವಾಣಿ ಸಂಖ್ಯೆ: 8277799990 ಇವರನ್ನು ಸಂಪರ್ಕಿಸಬಹುದು.

## ಫೆ.2ರಂದು ಮಡಿವಾಳ ಮಾಚಿದೇವ ಜಯಂತಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರ ಸಹಯೋಗದಲ್ಲಿ ಶ್ರೀ ಮಡಿವಾಳ ಮಾಚಿದೇವ ಜಯಂತಿ ಕಾರ್ಯಕ್ರಮವನ್ನು ಗದಗ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಫೆಬ್ರವರಿ 2 ರಂದು ಮಧ್ಯಾಹ್ನ 3 ಗಂಟೆಗೆ ಹಮ್ಮಿಕೊಳ್ಳಲಾಗಿದೆ.



ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಶಿವರಾಜ ಎಸ್ ತಂಗಡಗಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು.

ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್. ಕೆ.ಪಾಟೀಲ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಶಾಸಕ ಹಾಗೂ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್, ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್.ಪಾಟೀಲ, ಹಾವೇರಿ ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ , ಸಂಸದ ಪಿ.ಸಿ.ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷರಾದ ಡಿ.ಆರ್.ಪಾಟೀಲ, ನರಗುಂದ ಶಾಸಕ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ವಿಧಾನ ಪರಿಷತ್ ಶಾಸಕರುಗಳಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಯೋಜನೆ ಕಾರ್ಯಕ್ರಮಗಳು, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಶ್ರೀಮತಿ ಜಾನಕಿ ಕೆ.ಎಂ, ಆಗಮಿಸಲಿದ್ದಾರೆ.

ಶಿರಗುಂಪಿ ಸರ್ಕಾರಿ ಪ್ರೌಢಶಾಲೆಯ ಶಿಕ್ಷಕಿ ಶ್ರೀಮತಿ ಸುಜಾತಾ ಶರಣಪ್ಪ ಮಡಿವಾಳರ ಉಪನ್ಯಾಸ ನೀಡಲಿದ್ದಾರೆ.

ಜಿಲ್ಲಾಧಿಕಾರಿ ಹಾಗೂ ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸಿ.ಎನ್.ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಹಾಗೂ ಅಪರ ಜಿಲ್ಲಾ ದಂಡಾಧಿಕಾರಿ ಡಾ.ದುರಗೇಶ್ ಕೆ ಆರ್. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಸವರಾಜ ವಿ ಬಳ್ಳಾರಿ ಸ್ವಾಗತ ಕೋರಿದ್ದಾರೆ.



ಗದಗ ನಗರದ ಆದಾಯ ತೆರಿಗೆ ಇಲಾಖೆಯ ಅಧಿಕಾರಿಗಳಾದ ಮಹೇಶ ಎನ್.ಮಂತ್ರಶೆಟ್ಟಿಯವರನ್ನು ಸಂಸ್ಥೆಯ ಅಧ್ಯಕ್ಷರಾದ ಶರಣಬಸಪ್ಪ ಸಂಗಪ್ಪ ಗುಡಿಮನಿ ಹಾಗೂ ಸಂಸ್ಥೆಯ ತೆರಿಗೆ ಸಲಹಾ ಸಮಿತಿ ಚೇರಮನ್ ವಿಜಯಕುಮಾರ ಎಸ್.ಮಾಟಲದಿನ್ನಿ ಇವರ ನಿಯೋಗದೊಂದಿಗೆ ಭೇಟಿ ಮಾಡಿ ಅಭಿನಂದಿಸಿದರು. ಸಂಸ್ಥೆಯ ಉಪಾಧ್ಯಕ್ಷರಾದ ಜಯದೇವ ಎಂ.ಮೆಣಸಗಿ, ಸಿದ್ರಾಮಪ್ಪ ಎ.ಉಮಚಗಿ, ಸಹ ಗೌರವ ಕಾರ್ಯದರ್ಶಿ ಅಶೋಕ ಎಸ್.ಸಂಕಣ್ಣವರ, ಕೋಶಾಧ್ಯಕ್ಷ ಅರವಿಂದ ಎಸ್.ಕಾಮತ ಉಪಸ್ಥಿತರಿದ್ದರೆಂದು ಸಂಸ್ಥೆಯ ಗೌರವ ಕಾರ್ಯದರ್ಶಿ ಚನ್ನವೀರಪ್ಪ ಪ್ರಭಣ್ಣ ಹುಣಸಿಕಟ್ಟಿ ತಿಳಿಸಿದ್ದಾರೆ.

### ತಯಬಅಲಿ ಹೊಂಬಳರ ಪುಸ್ತಕ ಬಿಡುಗಡೆ ಕಾರ್ಯಕ್ರಮದಲ್ಲಿ ಕೆ.ಎಚ್. ಬೇಲೂರ ಅಭಿಮತ

# ಮೌಲಿಕ ಕೃತಿಗಳಿಂದ ಜ್ಞಾನದ ಕ್ಷಿತಿಜವನ್ನು ವಿಸ್ತರಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಸಾಹಿತ್ಯ ವಲಯಕ್ಕೆ ಅತ್ಯುತ್ತಮ ಕೃತಿಗಳನ್ನು ನೀಡುವ ಮೂಲಕ ಕನ್ನಡದ ಹಿರಿಮೆಯನ್ನು ಗಡಿಯಾಚೆಗೂ ವಿಸ್ತರಿಸುವ ಕಾರ್ಯವನ್ನು ಜ್ಞಾನಪೀಠ ಪ್ರಶಸ್ತಿ ಪುರಸ್ಕೃತ ಕವಿಗಳು ಮಾಡಿದ್ದಾರೆ. ಅವರ ಕೃತಿಗಳನ್ನು ಓದುವ ಮೂಲಕ ನಮ್ಮ ಜ್ಞಾನದ ಕ್ಷಿತಿಜವನ್ನು ವಿಸ್ತರಿಸಿಕೊಳ್ಳಬೇಕೆಂದು ಸಂಸ್ಕೃತಿ ಚಿಂತಕರಾದ ಪ್ರೊ. ಕೆ.ಎಚ್. ಬೇಲೂರ ತಿಳಿಸಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಜರುಗಿದ ಕಾರ್ಯಕ್ರಮದಲ್ಲಿ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರ ಭಾವಚಿತ್ರವನ್ನು ಅನಾವರಣಗೊಳಿಸಿ ಮಾತನಾಡಿದರು.

ಸಾಹಿತಿ ತಯಬಅಲಿ ಹೊಂಬಳ ಅವರ ಕಾದಂಬರಿ 'ಮೊದಲ ಸಹಗಮನ' ಹಾಗೂ ಮಕ್ಕಳ ಕಥಾ ಸಂಕಲನ 'ಬಾರೋ ಬಾರೋ ಚಂದ್ರಮ' ಕೃತಿಯನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದ ಡಾ. ಶಿವಪ್ಪ ಕುರಿ, ಬರಹಗಾರನಿಗೆ ಬದ್ಧತೆ ಇರಬೇಕು. ಅಸಹಾಯಕರಿಗೆ,



ಅಶಕ್ತರಿಗೆ ದನಿಯಾಗಬೇಕು. ಈ ದಿಸೆಯಲ್ಲಿ ತಯಬಅಲಿ ಅವರು ಪ್ರಚಲಿತ ಸಂದರ್ಭದ ಸಮಸ್ಯೆಗಳಿಗೆ ಅಕ್ಷರರೂಪವನ್ನು ನೀಡಿ ಓದುಗರನ್ನು ಎಚ್ಚರಿಸುವ ಕಾರ್ಯ ಮಾಡುತ್ತಿದ್ದಾರೆ. ಅವರ ದಣಿವರಿಯದ ಕಾಯಕ ನಿಷ್ಠೆ ನಮಗೆಲ್ಲಾ ಮಾದರಿಯಾದುದು ಎಂದು ತಿಳಿಸಿದರು.

ಮೊದಲ ಸಹಗಮನ ಕೃತಿಯನ್ನು ಪರಿಚಯಿಸಿದ ನೀಲಮ್ಮ ಅಂಗಡಿ, ಇಲ್ಲಿ ವೃದ್ಧಾಪ್ಯದ ಸಂಕಟಗಳನ್ನು ವಿವರಿಸಿದ್ದಾರೆ. ಬದುಕಿನ ಅಂತಿಮ ಸಮಯದಲ್ಲಿ ಹಿರಿಯರಿಗೆ ಬೇಕಾಗಿರುವದು ಹಿಡಿಯಷ್ಟು ಪ್ರೀತಿ. ಅದರಿಂದ ವಂಚಿತರಾಗಿ ತೊಳಲಾಡುವ ಕುಟುಂಬವೊಂದರ ಸಂದರ್ಭವನ್ನು ಮನಮಿಡಿವಯುವಂತೆ ಚಿತ್ರಿಸಿದ್ದಾರೆ ಎಂದು ತಿಳಿಸಿದರು.

ಬಾರೋ ಬಾರೋ ಚಂದ್ರಮ ಕೃತಿಯನ್ನು ಪರಿಚಯಿಸಿ ಮಾತನಾಡಿದ ಕ್ಷಮಾ ವಸ್ತ್ರದ, ಮಕ್ಕಳಿಗೆ ಕತೆಗಳೆಂದರೆ ಪಂಚಪ್ರಾಣ. ನೀತಿಯನ್ನು ನೇರವಾಗಿ ಹೇಳದೇ ಕತೆಗಳ ರೂಪದಲ್ಲಿ ತಿಳಿಸಿದರೆ ಹೆಚ್ಚು ಪರಿಣಾಮ ಬೀರುತ್ತದೆ. ವ್ಯಕ್ತಿತ್ವ ನಿರ್ಮಾಣಕ್ಕೆ ಅವಶ್ಯವಿರುವ ಕತೆಗಳು ಈ ಸಂಕಲನದಲ್ಲಿವೆ. ಮಕ್ಕಳ ಸಾಹಿತ್ಯ ನಿರ್ಲಕ್ಷಕ್ಕೆ ಒಳಗಾಗಿದ್ದು, ಅದರ ಶ್ರೀಮಂತಿಕೆಯನ್ನು ಹೆಚ್ಚಿಸುವ ಕಾರ್ಯವನ್ನು ಲೇಖಕರು ಮಾಡುತ್ತಿದ್ದಾರೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಮಕ್ಕಳು ಮತ್ತು ಹಿರಿಯರು ಇಂದು ಹೆಚ್ಚು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಮಕ್ಕಳು ಬಾಲ್ಯವನ್ನು, ಹಿರಿಯರು ಪ್ರೀತಿಯನ್ನು ಕಳೆದುಕೊಂಡಿದ್ದಾರೆ. ಮಕ್ಕಳ ಬಾಲ್ಯವನ್ನು ಸುಂದರಗೊಳಿಸುವ ಮತ್ತು ಹಿರಿಯರ ಸಂಕಟಗಳನ್ನು ಸಮಾಜದ ಮುಂದಿಡುವ ಪ್ರಯತ್ನವನ್ನು ಈ ಕೃತಿಗಳ ಮೂಲಕ ಮಾಡಿರುವ ತಯಬಅಲಿ ಅವರ ಸಾಹಿತ್ಯ ಸೇವೆ ಮಾದರಿಯಾದುದು ಎಂದು ತಿಳಿಸಿದರು.

ಕಿಶೋರಬಾಬು ನಾಗರಕಟ್ಟಿ ಸ್ವಾಗತಿಸಿದರು. ದತ್ತಪ್ರಸನ್ನ ಪಾಟೀಲ ನಿರೂಪಿಸಿದರು. ಡಿ.ಎಸ್. ಬಾಪುರಿ ವಂದಿಸಿದರು.

ಕಾರ್ಯಕ್ರಮದಲ್ಲಿ ಚಂದ್ರಶೇಖರ ವಸ್ತ್ರದ, ಡಾ. ಜಿ.ಬಿ. ಪಾಟೀಲ, ಬಸವರಾಜ ಗಿರಿತಿಮ್ಮಣ್ಣವರ, ಎಂ.ಸಿ. ವಗ್ಗಿ, ವಿದ್ಯಾಧರ ದೊಡ್ಡಮನಿ, ಶಶಿಕಾಂತ ಕೊರ್ಲಹಳ್ಳಿ, ಶಿವಾನಂದ ಭಜಂತ್ರಿ, ಕು.ಶಿ. ಜಯದೇವಭಟ್, ವಿ.ಎಸ್. ದಲಾಲಿ, ಕೆ.ಎಸ್. ದಂಡಗಿ, ಶೈಲಶ್ರೀ ಕಪ್ಪರದ, ಕೆ.ಎಸ್. ಬಾಳಿಕಾಯಿ, ಸಿ.ಎಂ. ಮಾರನಬಸರಿ, ರತ್ನಾ ಪುರಂತರ, ಶೈಲಜಾ ಗಿಡ್ನಂದಿ, ರಾಜಶೇಖರ ಕರಡಿ, ಬಿ.ಬಿ. ಹೊಳಗುಂದಿ, ಮಲ್ಲಿಕಾರ್ಜುನ ನಿಂಗೋಜಿ, ಪ್ರಲ್ಹಾದ ನಾರಪ್ಪನವರ, ಕಸ್ತೂರಿ ಕಡಗದ, ಮಂಜುಳಾ ವೆಂಕಟೇಶಯ್ಯ, ರಾಹುಲ ಗಿಡ್ನಂದಿ, ಎಸ್.ಯು. ಸಜ್ಜನಶೆಟ್ಟರ, ಅಶೋಕ ಸತ್ಯರಡ್ಡಿ, ಎಸ್.ಎ. ಬಾಣದ, ಅಶೋಕ ಅಂಗಡಿ, ವಾಯ್.ಕೆ. ಹಂದ್ರಾಳ, ಎಂ.ಸಿ. ಹುಚ್ಚಮ್ಮನವರ, ಎಂ.ಸಿ. ದೊಡ್ಡಮನಿ, ಅಕ್ಕಮ್ಮ ಪಾರ್ವತಿಮಠ, ಸತೀಶ ಕುಲಕರ್ಣಿ, ಮಲ್ಲಪ್ಪ ಡೋಣಿ, ಕೆ.ಜಿ. ವ್ಯಾಪಾರಿ, ಬಸವರಾಜ ನೆಲಜೇರಿ, ಕಿರಣ ಗುಗ್ಗರಿ, ದಾಕ್ಷಾಯಿಣಿ ಗುಗ್ಗರಿ, ದೀಲಿಪಕುಮಾರ ಮುಗಳಿ, ಪಾರ್ವತಿ ಮುಗಳಿ ಮೊದಲಾದವರು ಉಪಸ್ಥಿತರಿದ್ದರು.

## ಶ್ರೀ ಬನಶಂಕರಿ ದೇವಿಯ ಜಾತ್ರಾ ಮಹೋತ್ಸವ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**



ಪಟ್ಟಣದ ಕೆಂಚಲಾಪುರ ಓಣಿಯ ಐತಿಹಾಸಿಕ ಪ್ರಸಿದ್ಧ ಶ್ರೀ ಬನಶಂಕರಿ ದೇವಸ್ಥಾನದ ಜಾತ್ರಾ ಮಹೋತ್ಸವದ ಹಿನ್ನೆಲೆಯಲ್ಲಿ ಫೆ. 1ರಂದು ಭಾರತಹುಣ್ಣಿಮೆ ದಿನ ಸಂಜೆ 5ಕ್ಕೆ ರಥೋತ್ಸವ ಜರುಗಲಿದೆ. ಬೆಳಿಗ್ಗೆ ದೇವಸ್ಥಾನದಲ್ಲಿ ಅಭಿಷೇಕ, ಸತ್ಯನಾರಾಯಣ ಪೂಜೆ, ಹೋಮ-ಹವನ ಸೇರಿದಂತೆ ಧಾರ್ಮಿಕ ಕಾರ್ಯಕ್ರಮಗಳು ಜರುಗಲಿವೆ.

ಫೆ.2ಕ್ಕೆ ಸಂಜೆ ಕಡುಬಿನ ಕಾಳಗ ನೆರವೇರಲಿದೆ. ಶಿಥಿಲಾವಸ್ಥೆಯಲ್ಲಿದ್ದ ಈ ದೇವಸ್ಥಾನವನ್ನು 7 ವರ್ಷಗಳ ಹಿಂದೆ ಭಕ್ತಾದಿಗಳು, ದಾನಿಗಳು, ಜನಪ್ರತಿನಿಧಿಗಳ ಸಹಾಯ-ಸಹಕಾರದಿಂದ 1 ಕೋಟಿ ರೂ ವೆಚ್ಚದಲ್ಲಿ ಸುಂದರ ದೇವಸ್ಥಾನವನ್ನು ಪುನರ್ ನಿರ್ಮಿಸಿ ಲೋಕಾರ್ಪಣೆ ಮಾಡಲಾಗಿದೆ. 7ನೇ ವರ್ಷದ ವಾರ್ಷಿಕೋತ್ಸವ ಮತ್ತು 3ನೇ ವರ್ಷದ ರಥೋತ್ಸವ ಇದಾಗಿದ್ದು, ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ದೇವಸ್ಥಾನ ಕಮಿಟಿ ತಿಳಿಸಿದೆ.

## ವಿಮಾನ ಪತನ : ಮಹಾರಾಷ್ಟ್ರದ ಡಿಸಿಎಂ ಅಜಿತ್ ಪವಾರ್ ಸೇರಿ ಐದು ಮಂದಿ ಸಾವು





**■ವಿಜಯಸಾಕ್ಷಿ ಸುದ್ದಿ, ಪುಣೆ**

ಪುಣೆ ಜಿಲ್ಲೆಯ ಬಾರಾಮತಿ ಬಳಿ ಸಂಭವಿಸಿದ ವಿಮಾನ ದುರಂತದಲ್ಲಿ ಮಹಾರಾಷ್ಟ್ರದ ಉಪಮುಖ್ಯಮಂತ್ರಿ ಹಾಗೂ ನ್ಯಾಷನಲಿಸ್ಟ್ ಕಾಂಗ್ರೆಸ್ ಪಾರ್ಟಿ (ಎನ್‌ಸಿಪಿ) ನಾಯಕ ಅಜಿತ್ ಪವಾರ್ ಸೇರಿದಂತೆ 5 ಮಂದಿ ಸಾವನ್ನಪ್ಪಿದ್ದಾರೆ ಎಂದು ಸುದ್ದಿ ಸಂಸ್ಥೆ ಪಿಟಿಐ ವರದಿ ಮಾಡಿದೆ.

ವಿಮಾನದಲ್ಲಿ ಒಟ್ಟು 6 ಮಂದಿ ಇದ್ದರು. ಈ ಪೈಕಿ ಅಜಿತ್ ಪವಾರ್, ಅವರ ಆಪ್ತ ಕಾರ್ಯದರ್ಶಿ, ಇಬ್ಬರು ಪೈಲಟ್‌ಗಳು ಮತ್ತು ಒಬ್ಬರು ಕ್ಯಾಬಿನ್ ಕ್ರ್ಯೂ ಸಾವಿಗೀಡಾಗಿದ್ದಾರೆ. ಇನ್ನೊಬ್ಬರು ಭದ್ರತಾ ಸಿಬ್ಬಂದಿ ಗಾಯಗೊಂಡಿದ್ದಾರೆ ಎಂದು ತಿಳಿದು ಬಂದಿದೆ.

ಅಜಿತ್ ಪವಾರ್ ಚುನಾವಣಾ ಪ್ರಚಾರಕ್ಕೆ ಬಾರಾಮತಿಗೆ ತೆರಳಿದ್ದರು. ಲ್ಯಾಂಡಿಂಗ್ ವೇಳೆ ವಿಮಾನ ಪತನಗೊಂಡಿದೆ ಎಂದು ವರದಿಗಳು ಹೇಳಿವೆ. ಈ ಕುರಿತು ಹೆಚ್ಚಿನ ಮಾಹಿತಿ ನಿರೀಕ್ಷಿಸಲಾಗಿದ.

## ವಿದ್ಯೆಗೆ ವಿನಯವೇ ಭೂಷಣ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ವಿದ್ಯೆಗೆ ವಿನಯವೇ ಭೂಷಣವೆಂದು ಹಿರಿಯರು ಹೇಳಿರುವುದು ಸತ್ಯ. ಮನುಷ್ಯ ಎಷ್ಟೇ ವಿದ್ಯಾವಂತನಾದರೂ ಅವನಲ್ಲಿ ಅಹಂಕಾರ ಬಂದರೆ ಆತನ ಅಧಃಪತನ ಶುರುವಾದಂತೆಯೆ. ಆದ್ದರಿಂದ ವಿದ್ಯಾವಂತರು ಎಂದಿಗೂ ವಿನಯವಂತರಾಗಿರಬೇಕು ಎಂದು ಸೂಡಿಯ ಶ್ರೀ ಗಜಾನನ ಸಂಸ್ಕೃತ ಪಾಠಶಾಲೆಯ ಅಧ್ಯಾಪಕ ಕಿರಣ ಜೋಷಿ ಹೇಳಿದರು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ನಡೆದಿರುವ ಶ್ರೀ ಗುರುಪ್ರತಿಪದೆ ಉತ್ಸವದಲ್ಲಿ ಶ್ರೀ ದತ್ತನ ಅಭಿಷೇಕದ ನಂತರ ಅವರು ಮಾತನಾಡಿದರು.

ಜಗತ್ತಿನಲ್ಲಿ ಅದೆಷ್ಟೋ ಪಂಡಿತರು ಆಗಿ ಹೋಗಿದ್ದಾರೆ. ಯಾರು ವಿನಯತೆಯಿಂದ ನಡೆದುಕೊಂಡಿದ್ದಾರೆಯೋ ಅವರು ಇಂದಿಗೂ ಉನ್ನತ ಸ್ಥಾನದಲ್ಲಿದ್ದಾರೆ. ಅಹಂಕಾರ ತೋರಿದವರು ಜನಮಾನಸದಿಂದ ಕಣ್ಮರೆಯಾಗಿ ಹೋಗಿದ್ದಾರೆ. ಆದ್ದರಿಂದ ಪ್ರತಿಯೊಬ್ಬರೂ ವಿನಯತೆಯನ್ನು ಬೆಳೆಸಿಕೊಂಡು ಎಲ್ಲರೊಂದಿಗೆ ಸಹಜೀವನ ಮಾಡುವತ್ತ ಯೋಚಿಸಬೇಕೆಂದರು.

ಉತ್ಸವ, ಜಾತ್ರೆಗಳು ಜನರನ್ನು ಒಗ್ಗೂಡಿಸುವ ಕಾರ್ಯ ಮಾಡುತ್ತಿದ್ದು, ಇದಕ್ಕೆ ಮಠ-ಮಂದಿರಗಳು ಕೇಂದ್ರ ಸ್ಥಾನಗಳಾಗಿವೆ. ಇಲ್ಲಿ ಸೇರಿದಾಗ ಎಲ್ಲರೂ ಒಮ್ಮನದಿಂದ ನಮ್ಮ ನಮ್ಮ ಆಚರಣೆ-ಪರಂಪರೆಗಳ ಬಗ್ಗೆ ಯೋಚಿಸಬೇಕು. ನರೇಗಲ್ಲದಲ್ಲಿ ಈ ಉತ್ಸವ 116 ವರ್ಷಗಳಿಂದ ಸಾಗಿ ಬಂದಿರುವುದು ಸಂತಸದ ವಿಷಯ ಎಂದರು.

ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಅತಿಥಿಗಳನ್ನು ಪರಿಚಯಿಸಿ, ಸ್ವಾಗತಿಸಿದರು. ಮಂಜುನಾಥ ಗ್ರಾಮಪುರೋಹಿತ ನಿರೂಪಿಸಿದರು. ಬಿ.ಎಲ್. ಕುಲಕರ್ಣಿ ವಂದಿಸಿದರು.



## 'ಓದಿನ ಮನೆ' ಅತ್ಯಂತ ಉಪಯುಕ್ತ




**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು ಸದ್ದು ಗದ್ದಲವಿಲ್ಲದ ಶಾಂತ ವಾತಾವರಣ ಸೃಷ್ಟಿಸಿ ಏಕಾಗ್ರಚಿತ್ತದಿಂದ ಅಭ್ಯಾಸದಲ್ಲಿ ತಲ್ಲೀನರಾಗಲು ಓದಿನ ಮನೆ ಕಾರ್ಯ ಯೋಜನೆ ಅತ್ಯಂತ ಉಪಯುಕ್ತವಾಗಿದೆ ಎಂದು ಗದಗ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಅಭಿಪ್ರಾಯ ವ್ಯಕ್ತಪಡಿಸಿದರು.

ಅವರು ಶಿಗ್ಲಿಯ ಕೆ.ಜಿ. ಮುದಗಲ್ಲ ಪ್ರೌಢಶಾಲೆಯ ಜಿ.ಎಸ್.ಎಸ್ ಶಾಲಾ ಉತ್ಸವದ ವೇಳೆ ಓದಿನ ಮನೆ ಉದ್ಘಾಟಿಸಿ ಮಾತನಾಡಿದರು.

ಓದಿನ ಮನೆಯಲ್ಲಿ ವಿದ್ಯಾರ್ಥಿಗಳಲ್ಲಿ ಓದುವ ಆಸಕ್ತಿ, ಆರೋಗ್ಯಕರ ಸ್ಪರ್ಧಾತ್ಮಕ ಮನೋಭಾವ ಉಂಟಾಗುತ್ತದೆ. ಓದುವ ವೇಳೆ ಮೂಡುವ ಪ್ರಶ್ನೆ, ಸಮಸ್ಯೆಗಳಿಗೆ ಶಿಕ್ಷಕರು ಮತ್ತು ಸಹಪಾಠಿಗಳೊಂದಿಗೆ ಚರ್ಚಿಸಿ ಬಗೆಹರಿಸಿಕೊಳ್ಳಬಹುದಾಗಿದೆ. ಟಿವಿ, ಮೊಬೈಲ್ ಇತರೆ ಚಟುವಟಿಕೆಗಳಿಂದ ದೂರವಿದ್ದು, ಓದುವ, ಬರೆಯುವ ಕೌಶಲ್ಯ ಹೆಚ್ಚುತ್ತದೆ. ವಿದ್ಯಾರ್ಥಿಗಳಲ್ಲಿ ಶಿಸ್ತು, ಸಮಯಪಾಲನೆ ಜತೆಗೆ ಪರೀಕ್ಷೆ ಎದುರಿಸುವಲ್ಲಿ ಆತ್ಮಸ್ಥೈರ್ಯ ಬೆಳೆಸುತ್ತದೆ.

ಈ ಕಾರ್ಯ ಯೋಜನೆ ಯಶಸ್ವಿಯಾಗುವಲ್ಲಿ ಪಾಲಕರು ಮತ್ತು ಶಿಕ್ಷಕರ ಪ್ರೋತ್ಸಾಹ ಅಗತ್ಯ ಎಂದರು.

ಈ ವೇಳೆ ಬಿಇಓ ಹೆಚ್. ನಾಣ್ಕಿ ನಾಯಕ, ಸಂಸ್ಥೆಯ ಚೇರಮನ್ ರಂಜನ್ ಪಾಟೀಲ, ಸಹ ಚೇರಮನ್ ರಾಜರತ್ನ ಹುಲಗೂರ, ಪ್ರವೀಣ ಹುಲಗೂರ, ಶಿವಾನಂದ ಮೂಲಿಮನಿ, ಯಲ್ಲಪ್ಪ ತಳವಾರ, ಮಂಜುನಾಥ ಶಂಭೋಜಿ, ಮುಖ್ಯೋಪಾಧ್ಯಾಯ ಎಲ್.ಎಸ್. ಅರಳಹಳ್ಳಿ, ಪ್ರಕಾಶ ಮ್ಯಾಗೇರಿ, ರಮೇಶ ನವಲೆ, ಸಿ.ವ್ಹಿ. ಹೂಗಾರ, ಪ್ರಕಾಶ ರಜಪೂತ, ಅಮರೇಶ್ವರ ಹುಲಗೂರ, ಫಕ್ಕೀರೇಶ ಕುರಿ, ವೀರಣ್ಣ ಅಳ್ಳಳ್ಳಿ, ಎಂ.ವಿ. ತಿಮ್ಮಾಪುರ ಮುಂತಾದವರಿದ್ದರು.

## ಹಬ್ಬಗಳಲ್ಲಿ ವೈಜ್ಞಾನಿಕ ಸತ್ಯ ಅಡಗಿದೆ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಬೇಡಿದ ಮಾತ್ರಕ್ಕೆ ಬೇಡಿದ್ದನ್ನು ನೀಡುವ ಕಲಿಯುಗದ ಭಗವಂತ ಎಂದರೆ ಶ್ರೀ ಗುರು ದತ್ತಾತ್ರೇಯ. ಭಕ್ತರ ಅಭೀಷ್ಟೆಗಳನ್ನು ತಡಮಾಡದೆ ನೆರವೇರಿಸುವ ಶ್ರೀ ದತ್ತಾತ್ರೇಯನನ್ನು ಶ್ರದ್ಧೆಯಿಂದ ಪೂಜಿಸಿದರೆ ಮನೋಕಾಮನೆಗಳು ಈಡೇರುತ್ತವೆ ಎಂದು ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಹೇಳಿದರು.

ಪಟ್ಟಣದ ಶ್ರೀ ದತ್ತಾತ್ರೇಯ ದೇವಸ್ಥಾನದಲ್ಲಿ ನಡೆದಿರುವ ದತ್ತ ಉತ್ಸವದ 5ನೇ ದಿನದ ಪಲ್ಲಕ್ಕಿ ಸೇವೆಯಲ್ಲಿ ಅವರು ಮಾತನಾಡಿದರು.

ಪ್ರತಿ ಹಬ್ಬದಲ್ಲಿಯೂ ಒಂದು ವೈಜ್ಞಾನಿಕ ಸತ್ಯ ಇರುವುದನ್ನು ನಾವು ಕಾಣಬಹುದು. ಹಾಗೆಯೇ ಆಯಾ ಋತುಗಳಿಗೆ ಅನ್ವಯವಾಗಿ ಆಹಾರದ ಪದ್ಧತಿಯನ್ನೂ ಸಹ ಹಿರಿಯರು ಅಳವಡಿಸಿ ನಮ್ಮ ಜೀವನಕ್ಕೆ ಮಹದುಪಕಾರ ಮಾಡಿದ್ದಾರೆ. ಇಂತಹ ಉತ್ಸವದ ಸಂದರ್ಭದಲ್ಲಿ ಈ ವಿಷಯಗಳನ್ನೆಲ್ಲ ತಿಳಿದುಕೊಂಡು ಮುಂಬರುವ ಹಬ್ಬಗಳನ್ನು ಶ್ರದ್ಧಾ-ಭಕ್ತಿಗಳಿಂದ ಆಚರಿಸಬೇಕೆಂದು ಹೇಳಿದರು.

116 ವರ್ಷಗಳಿಂದ ಸಾಗಿ ಬಂದಿರುವ ಶ್ರೀ ಗುರುಪ್ರತಿಪದೆ ಉತ್ಸವವು ಅನೇಕ ಭಕ್ತರ ಬಾಳಿನಲ್ಲಿ ಬೆಳಕು ನೀಡಿದೆ. ದೂರದ ಗಾಣಗಾಪುರಕ್ಕೆ ಹೋಗಲು ಆಗದ ಭಕ್ತರು 2ನೇ ಗಾಣಗಾಪುರವೆಂದೇ ಪ್ರಸಿದ್ಧವಾಗಿರುವ ಈ ದೇವಸ್ಥಾನದಲ್ಲಿ ಹರಕೆ ಕಟ್ಟಿಕೊಂಡರೆ ಅದು ನೆರವೇರುವುದನ್ನು ಅನೇಕ ಬಾರಿ ನೋಡಿದ್ದೇವೆ. ಆದ್ದರಿಂದ ಎಲ್ಲರೂ ಶ್ರೀ ದತ್ತಾತ್ರೇಯನನ್ನು ಪೂಜಿಸಿ, ಭಜಿಸಿ, ಕೃತಾರ್ಥರಾಗೋಣ ಎಂದರು.

ಅನಿತಾ ಗ್ರಾಮಪುರೋಹಿತ ಶ್ರೀ ಗೋಂದಾವಲೇಕರ ಮಹಾರಾಜರ ಪ್ರವಚನ ಓದಿದರು. ರಾಮಕೃಷ್ಣ ಸದರಜೋಷಿ, ರಂಗನಾಥ ಕುಲಕರ್ಣಿ, ಪಲ್ಲಕ್ಕಿ ಸೇವೆ ನೆರವೇರಿಸಿದರು. ಶ್ರೀವಲ್ಲಭಭಟ್ಟ ಸದರಜೋಷಿ ನೇತೃತ್ವ ವಹಿಸಿದ್ದರು. ಸುಮಂಗಲೆಯರಿಂದ ಗಾಯನ ಸೇವೆ ಜರುಗಿತು.

### ಹಿರಿಯ ನಾಗರಿಕರ, ನಿವೃತ್ತ ನೌಕರ ಸಂಘದ 12ನೇ ವಾರ್ಷಿಕೋತ್ಸವದಲ್ಲಿ ಬಿ.ಎಸ್. ಗೌಡರ ಕರೆ

# ಸೋಮಾರಿತನ ತೊರೆದು ಕ್ರಿಯಾಶೀಲರಾಗಿ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ನಿವೃತ್ತರಾದ ತಕ್ಷಣ ನಮ್ಮ ಜೀವನ ಮುಗಿದಂತಲ್ಲ. ನಾವಿನ್ನೂ ಹೆಚ್ಚು ಕ್ರಿಯಾಶೀಲರಾಗಿ ನಿತ್ಯದ ಚಟುವಟಿಕೆಗಳಲ್ಲಿ ತೊಡಗಿಕೊಳ್ಳಬೇಕು. ಅದಕ್ಕೆ ನಾವು ಸೋಮರಿತನವನ್ನು ತೊರೆಯಬೇಕೆಂದು ನಿವೃತ್ತ ಡಿಡಿಪಿಯು ಬಿ.ಎಸ್. ಗೌಡರ ಹೇಳಿದರು.

ಪಟ್ಟಣದ ಹಿರೇಮಠದ ಸಭಾಭವನದಲ್ಲಿ ನಡೆದ ಹಿರಿಯ ನಾಗರಿಕರ ಮತ್ತು ನಿವೃತ್ತ ನೌಕರ ಸಂಘದ 12ನೇ ವಾರ್ಷಿಕೋತ್ಸವದಲ್ಲಿ ಅವರು ಮಾತನಾಡಿದರು.

ಈಗಿನ ದಿನಗಳಲ್ಲಿ ನಾವು ನಿಶ್ಚಿಂತರಾಗಿರಬೇಕು. ಚಿಂತೆಯನ್ನು ಹಚ್ಚಿಕೊಂಡರೆ ಜೀವನಕ್ಕೆ ಬೇಗನೆ ಮುಪ್ಪು ಆವರಿಸುತ್ತದೆ. ಆಗುವುದು ಆಗಿಯೇ ಆಗುತ್ತದೆ ಎನ್ನುವ ನಂಬಿಕೆಯನ್ನು ಇಟ್ಟುಕೊಂಡು ಜೀವನ ಸಾಗಿಸಬೇಕು. ಹಿರಿಯರಾಗಿ ಮನೆಯಲ್ಲಿನ ಮೊಮ್ಮಕ್ಕಳಿಗೆ ಉತ್ತಮ ಸಂಸ್ಕಾರ ನೀಡಲು ಯತ್ನಿಸಬೇಕೆಂದರು.

ರಾಜ್ಯ ನಿವೃತ್ತ ಸಂಘದ ನಿರ್ದೇಶಕ ರಾಜಶೇಖರ ಕರಡಿ ಮಾತನಾಡಿ, ನಿವೃತ್ತ ನೌಕರರ ಸೌಲಭ್ಯಗಳ ಬಗ್ಗೆ ವಿವರಿಸಿದರಲ್ಲದೆ,



ಕಮ್ಯುಟೇಷನ್‌ನ ಅವಧಿಯನ್ನು 15 ವರ್ಷಗಳಿಂದ 10 ವರ್ಷ 8 ತಿಂಗಳಿಗೆ ಬೇರೆ ರಾಜ್ಯಗಳಲ್ಲಿ ಕಡಿತಗೊಳಿಸಿರುವ ಬಗ್ಗೆ ವಿವರಿಸಿ, ಇದು ನಮ್ಮ ರಾಜ್ಯದಲ್ಲಿಯೂ ಶೀಘ್ರವೇ ಜಾರಿಯಾಗಲಿದೆ ಎಂದರು.

ಸನ್ಮಾನ ಸ್ವೀಕರಿಸಿ ಎನ್.ಎಚ್. ಮಾಸರೆಡ್ಡಿ ಮತ್ತು ಮುತ್ತಣ್ಣ ಪಲ್ಲೇದ ಮಾತನಾಡಿದರು.

ಗೌರವಾಧ್ಯಕ್ಷ ಸಿ.ವಿ. ವಂಕಲಕುಂಟಿ, ಅಧ್ಯಕ್ಷ ಡಿ.ಎ. ಅರವಟಗಿಮಠ ಮಾತನಾಡಿದರು.

ಸಭೆಯಲ್ಲಿ ಎಂ.ಎ. ಹಿರೆವಡೆಯರ, ಕ.ಕೆ. ದಾಸರ, ಬಿ.ವಿ. ಬಳಿಗೇರ, ಎಸ್.ಜಿ. ಮಾಳಗೌಡ್ರ, ಜಿ.ಎ. ಬೆಲ್ಲದ, ಜಿ.ಎಸ್. ಹಿರೆವಡೆಯರ, ಎಸ್.ಆರ್. ಬಾಗಲಿ, ಎಫ್.ಬಿ. ಧರ್ಮಾಯತ, ಬಸಪ್ಪ ಉಪ್ಪಿನ, ವೈ.ಆರ್. ಬಸಾಪೂರ, ಡಾ. ಆರ್.ಕೆ. ಗಚ್ಚಿನಮಠ, ವಿ.ಎಸ್. ಕೊಟಗಿ, ಸಿ.ಎ. ಅಂಗಡಿ, ಎ.ಎಚ್. ಬೇವಿನಕಟ್ಟಿ, ಎಚ್. ಕೆ. ಜೋಗಿ, ವಿ.ಬಿ. ಮೇಟಿ, ಬಿ.ಎ. ಕಲಾಲಬಂಡಿ, ರೇಣುಕಾನಾಯಕ, ಎಸ್.ಬಿ. ಹೊಸಮನಿ, ಎನ್. ಎಚ್. ಚಿಕ್ಕನಗೌಡ್ರ, ಕೆ.ಎಸ್. ಬಾಚಲಾಪೂರ, ಹನುಮಂತಪ್ಪ ಮಣ್ಣೊಡ್ಡರ ಮತ್ತಿತರರಿದ್ದರು.

ಸಂಘದ ಪ್ರಧಾನ ಕಾರ್ಯದರ್ಶಿ ವೀರಭದ್ರಪ್ಪ ಕೆರಿಯವರ ಪ್ರಾರ್ಥಿಸಿದರು. ಅರುಣ ಕುಲಕರ್ಣಿ ಸ್ವಾಗತಿಸಿದರು. ಶಿವಯೋಗಿ ಜಕ್ಕಲಿ ನಿರೂಪಿಸಿ, ವಂದಿಸಿದರು.

ಸಾನ್ನಿಧ್ಯ ವಹಿಸಿದ್ದ ಶ್ರೀ ಮಲ್ಲಿಕಾರ್ಜುನ ಸ್ವಾಮೀಜಿ ಆಶೀರ್ವಚನ ನೀಡಿ, ಮನೆಯಲ್ಲಿ ಹಿರಿಯರಿರುವುದು ಗೌರವದ ವಿಷಯ. ಇದನ್ನು ಮಕ್ಕಳು ಅರ್ಥ ಮಡಿಕೊಂಡು ನಿವೃತ್ತರು ಎಂದು ಅಸಡ್ಡೆ ಮಾಡದೆ ಅವರನ್ನು ಜೋಪಾನ ಮಾಡಬೇಕು.

ಮಕ್ಕಳು ಚಿಕ್ಕವರಿದ್ದಾಗ ತಂದೆ-ತಾಯಿಗಳು ಅವರನ್ನು ಸಾಕಿ ಸಲಹಿರುತ್ತಾರೆ. ವಯಸ್ಸಾದ ಮೇಲೆ ಅವರೂ ಸಹ ಮಕ್ಕಳು ಎಂದು ತಿಳಿದು ಅವರನ್ನು ವೃದ್ಧಾಶ್ರಮಕ್ಕೆ ಸೇರಿಸದೆ ಕಾಳಜಿ ಮಾಡಬೇಕೆಂದರು.

# ಅಕಾಡೆಮಿ ಬಾಲ ಗೌರವ ಪ್ರಶಸ್ತಿಗಾಗಿ ಅರ್ಜಿಗಳ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಬಾಲವಿಕಾಸ ಅಕಾಡೆಮಿಯಿಂದ 2024-25 ಹಾಗೂ 2025-26ನೇ ಸಾಲಿನಲ್ಲಿ ರಾಜ್ಯ, ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ವಿಶೇಷ ಸಾಧನೆಗೈದ 18 ವರ್ಷದ ಒಳಗಿನ ಮಕ್ಕಳಿಂದ ಬಾಲ ಗೌರವ ಪ್ರಶಸ್ತಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಮಕ್ಕಳು ಕ್ರೀಡೆ, ಸಂಗೀತ, ನೃತ್ಯ, ಬಹುಮುಖ ಪ್ರತಿಭೆ, ನಟನೆ, ಚಿತ್ರಕಲೆ ಹಾಗೂ ವಿಜ್ಞಾನ ಮತ್ತು ಸಂಶೋಧನೆ ಯಾವುದಾದರೂ ಒಂದು ಕ್ಷೇತ್ರದಲ್ಲಿ ಅಸಾಧಾರಣ ಸಾಧನೆಯನ್ನು ಮಾಡಿ ಪ್ರಶಸ್ತಿ ಪುರಸ್ಕೃತ ಮಗುವಾಗಿರಬೇಕು. ಇಂತಹ ಮಕ್ಕಳು ಅಕಾಡೆಮಿ ಬಾಲ ಗೌರವ ಪ್ರಶಸ್ತಿಗಾಗಿ ತಮ್ಮ ಸ್ವಯಂ ದೃಢೀಕೃತ ನಕಲು ದಾಖಲೆಗಳೊಂದಿಗೆ ಹಾಗೂ ಸ್ವ-ವಿವರಗಳನ್ನೊಳಗೊಂಡ ಅರ್ಜಿಯನ್ನು ಫೆಬ್ರವರಿ 20 ರೊಳಗಾಗಿ ಕಚೇರಿಯ ವೇಳೆಯಲ್ಲಿ ಅಕಾಡೆಮಿಯ ಕೇಂದ್ರ ಕಚೇರಿಗೆ ಸಲ್ಲಿಸುವುದು.

ನಂತರ ಬಂದ ಅರ್ಜಿಗಳನ್ನು ಪ್ರಶಸ್ತಿಗೆ ಪರಿಗಣಿಸಲಾಗುವುದಿಲ್ಲ.

ಗದಗ ಜಿಲ್ಲೆಯ ಉಪನಿರ್ದೇಶಕರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಕಚೇರಿಯಲ್ಲಿ ಹಾಗೂ ಅಕಾಡೆಮಿಯ ಕೇಂದ್ರ ಕಚೇರಿಯಲ್ಲಿ ಅರ್ಜಿ ನಮೂನೆಯನ್ನು ಪಡೆಯುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೇಂದ್ರ ಕಚೇರಿ ವಿಳಾಸ: ಯೋಜನಾಧಿಕಾರಿಗಳು, ಚಂದ್ರಿಕಾ ಲೇ ಔಟ್ ಹಿಂಬಾಗ ಕೆ.ಎಚ್.ಬಿ. ಕಾಲೋನಿ ಲಕಮನಹಳ್ಳಿ, ಧಾರವಾಡ -580004 ದೂರವಾಣಿ ಸಂಖ್ಯೆ :0836-2465490

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಲು 8050392209, 7204396275, 9448981944

## ಜೇನು ಸಾಕಾಣಿಕೆ ತರಬೇತಿ ಕಾರ್ಯಕ್ರಮದಲ್ಲಿ ಕೃಷಿ ಸಂಶೋಧನಾ ಕೇಂದ್ರದ ಮುಖ್ಯಸ್ಥೆ ಕಲಾವತಿ

# ಜೇನು ಇದ್ದರಷ್ಟೇ ಮನುಷ್ಯನ ಉಳಿವು



ತೋಟಗಾರಿಕೆ ಇಲಾಖೆಯ ಜಂಟಿ ನಿರ್ದೇಶಕ ಮಲ್ಲಿಕಾರ್ಜುನ ಬಾವಗೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಇಲಾಖೆಯಿಂದ ರೈತರಿಗೆ ಜೇನು ಸಾಕಾಣಿಕೆ ಮಾಡಲು ಜೇನು ಪೆಟ್ಟಿಗೆಗಳನ್ನು ನೀಡಿ ಪ್ರೋತ್ಸಾಹಿಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ಹೆಚ್ಚಿನ ತರಬೇತಿ ನೀಡುವ ಮೂಲಕ ಜಿಲ್ಲೆಯಲ್ಲಿ ಜೇನು ಕೃಷಿಯನ್ನು ಅಭಿವೃದ್ಧಿಪಡಿಸಲಾಗುವುದು ಎಂದು ಹೇಳಿದರು.

■ವಿಜಯಸಾಕ್ಷಿ ಸುದ್ದಿ, ಗದಗ

ಜೇನು ನೈಸರ್ಗಿಕ ಉತ್ಪಾದನೆಯಾಗಿದ್ದು, ಬೇರೆ ಉತ್ಪನ್ನಗಳಿಗೆ ಕೊನೆ ಎಂಬುದು ಇರುವದರಿಂದ ಅವುಗಳು ನಂತರ ಬಳಕೆಗೆ ಬರುವದಿಲ್ಲ. ಆದರೆ, ಜೇನುತುಪ್ಪಕ್ಕೆ ಕೊನೆ ಎಂಬುದು ಇಲ್ಲದಿರುವದರಿಂದ ಅದನ್ನು ಎಷ್ಟು ವರ್ಷವಾದರೂ ಬಳಸಬಹುದು ಎಂದು ಕೃಷಿ ಸಂಶೋಧನಾ ಕೇಂದ್ರದ ಮುಖ್ಯಸ್ಥರಾದ ಕಲಾವತಿ ಕಂಬಳಿ ಹೇಳಿದರು.

ನಗರದ ನೂತನ ಬಸ್ ನಿಲ್ದಾಣದ ಹತ್ತಿರವಿರುವ ತೋಟಗಾರಿಕಾ ಇಲಾಖೆಯ ತರಬೇತಿ ಕೇಂದ್ರದಲ್ಲಿ ರೈತರಿಗೆ ಜೇನು ಸಾಕಾಣಿಕೆ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿ, ಜೇನು ಸಾಕಾಣಿಕೆಯಿಂದ ತೋಟಗಾರಿಕೆ ಬೆಳೆಗಳಲ್ಲಿ ಶೇ. 80ರಷ್ಟು ಹಾಗೂ ಆಹಾರ ಬೆಳೆಗಳಲ್ಲಿ ಶೇ. 70ರಷ್ಟು ಇಳುವರಿ ಹೆಚ್ಚಾಗುತ್ತದೆ. ಜೇನಿನ ಪರಾಗಸ್ಪರ್ಶದಿಂದ ಹೂವು ಕಾಳನ್ನು ಕಟ್ಟಿ ಬೆಳೆಗಳು ನೇರವಾಗಿ ಬೆಳೆಯುತ್ತವೆ ಎಂದು ತಿಳಿಸಿದರು.

ಕುಟುಂಬಕೋಸ್ಕರ ನಿಸ್ವಾರ್ಥವಾಗಿ ಬದುಕುವ ಜೀವಿ ಜೇನು. ಕಾರ್ಮಿಕ ಜೇನುಗಳು ರಾಣಿ ಜೇನಿನ ಮಾತನ್ನು ಎಂದು ಮೀರುವದಿಲ್ಲ. ಅದು ಪೀರೋಪಿನ್ ಎಂಬ ದ್ರವ್ಯ ಬಿಡುವದರಿಂದ ಅದರ ವಾಸನೆಯನ್ನು ಗ್ರಹಿಸಿ ಕಾರ್ಮಿಕ ಜೇನುಗಳು ಕೆಲಸ ಮಾಡುತ್ತವೆ. ರಾಣಿ ಜೇನು 3 ವರ್ಷಗಳವರೆಗೆ ಬದುಕುತ್ತದೆ. ಉಳಿದ ಜೇನುಗಳು 90 ದಿನಗಳವರೆಗೆ ಬದುಕುತ್ತವೆ. ಇವುಗಳು ರಾಜಶಾಹಿ ರಸವನ್ನು ತಿನ್ನಿಸಿ ರಾಣಿ ಜೇನನ್ನಾಗಿ ಮಾರ್ಪಾಡು ಮಾಡುತ್ತವೆ. ಜೇನುಗಳು 9 ಕಿ.ಮಿವರೆಗೆ ಸಂಚರಿಸಿ ಆಹಾರವನ್ನು ಹುಡುಕತ್ತವೆ. ಜೇನಿನಿಂದ ಮನುಷ್ಯರು ಕಲಿಯುವದು ಸಾಕಷ್ಟಿದೆ ಎಂದು ಹೇಳಿದರು.

ಹಿರಿಯ ಸಹಾಯಕ ನಿರ್ದೇಶಕ ಶೈಲೇಂದ್ರ ಬಿರಾದಾರ ಮಾತನಾಡಿ, ಜೇನು ಸಾಕಾಣಿಕೆಯಿಂದ ಆರ್ಥಿಕವಾಗಿ ಸದೃಢವಾಗಬಹುದು. ರೈತರು ಹೆಚ್ಚಿನ ಸಂಖ್ಯೆಯಲ್ಲಿ ಉತ್ಸಾಹದಿಂದ ಆಗಮಿಸಿರುವುದು ಸಂತಸ ತಂದಿದೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಕಾರ್ಯಾಗಾರಗಳನ್ನು ಆಯೋಜಿಸಿ ಜೇನು ಕೃಷಿಗೆ ಹೆಚ್ಚಿನ ಒತ್ತು ನೀಡಲಾಗುವುದು ಎಂದು ಹೇಳಿದರು.

ಪ್ರಗತಿಪರ ರೈತರಾದ ಪರಮೇಶ ಜಂತ್ಲಿ ಮಾತನಾಡಿ, ಜೇನು ಕೃಷಿಯಲ್ಲಿ ಎಲ್ಲರೂ ತೊಡಗಿಸಿಕೊಂಡು ನಾಡಿಗೆ ವಿಶೇಷ ಸೇವೆ ಸಲ್ಲಿಸೋಣ ಎಂದು ಹೇಳಿದರು.

ರುದ್ರಣ್ಣ ಗುಳಗುಳಿ ಮಾತನಾಡಿ, ಇಲ್ಲಿಯವರೆಗೆ ಮಾಹಿತಿ ಕೊರತೆಯಿಂದ ಜೇನು ಸಾಕಾಣಿಕೆಯಲ್ಲಿ ಸಾಕಷ್ಟು ಹಿಂದೆ ಉಳಿದಿದ್ದೇವೆ. ವರ್ಷಕ್ಕೆ 8ರಿಂದ 10 ಟನ್ ಜೇನುತುಪ್ಪಕ್ಕೆ ಬೇಡಿಕೆ ಇರುವದರಿಂದ ಕಳೆದ 10 ವರ್ಷಗಳಿಂದ ಜೇನು ಸಾಕಾಣಿಕೆ ಮಾಡುತ್ತ ಬಂದಿದ್ದರೂ ಬೇಡಿಕೆಗನುಗುಣವಾಗಿ ಜೇನು ಸಂಗ್ರಹಿಸಲು ಸಾಧ್ಯವಾಗುತ್ತಿಲ್ಲ. ಮುಂದಿನ ದಿನಗಳಲ್ಲಿ ಹೆಚ್ಚಿನ ತರಬೇತಿ ನೀಡಿ ಜೇನು ಕೃಷಿಗೆ ಪ್ರೋತ್ಸಾಹ ನೀಡಬೇಕು ಎಂದು ಹೇಳಿದರು.

ಸಚಿನ್ ಹಿರೇಕುಂಬಾರ ಜೇನು ಸಾಕಾಣಿಕೆ ಕುರಿತು ಸಂಕ್ಷಿಪ್ತವಾಗಿ ವಿವರಿಸಿದರು. ಮಂಜುನಾಥ ಹೂಗಾರ ಸ್ವಾಗತಿಸಿದರು. ನಿಂಗಪ್ಪ ಕುಂಬಾರ ಕಾರ್ಯಕ್ರಮ ನಿರೂಪಿಸಿದರು. ನಂದಿನಿ ಹಳ್ಳಿ ವಂದಿಸಿದರು.

# ಉಪನ್ಯಾಸಕರಿಗೆ ಕ್ರೀಡಾ ಅವಕಾಶಗಳು ಅಗತ್ಯ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಂ.ಅಗಡಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಮಂಗಳವಾರ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಬೆಳಗಾವಿ ವಲಯ ಮಟ್ಟದ ಶಿಕ್ಷಕ ಮತ್ತು ಶಿಕ್ಷಕೇತರ ಸಿಬ್ಬಂದಿ ವರ್ಗದ ವಾಲಿಬಾಲ್ ಪಂದ್ಯಾವಳಿಯನ್ನು ಹಮ್ಮಿಕೊಳ್ಳಲಾಗಿತ್ತು. ಈ ಪಂದ್ಯಾವಳಿಯಲ್ಲಿ ಹಳಿಯಾಳದ ವಿಡಿಐಟಿ ಕಾಲೇಜು ತಂಡ ಪ್ರಥಮ ಸ್ಥಾನದ ಪ್ರಶಸ್ತಿ ತನ್ನದಾಗಿಸಿಕೊಂಡಿತು.

ಪಂದ್ಯಾವಳಿಯನ್ನು ಪಿಎಸ್ಐ ನಾಗರಾಜ ಗಡಾದ ಉದ್ಘಾಟಿಸಿ ಮಾತನಾಡಿ, ಉಪನ್ಯಾಸಕರು ಹಾಗೂ ಸಿಬ್ಬಂದಿಗಳು ವಿಷಯ ಜ್ಞಾನದ ಜೊತೆಗೆ ಕ್ರೀಡೆಗಳಲ್ಲಿಯೂ ಪರಿಣಿತಿ ಹೊಂದಿರುತ್ತಾರೆ. ಆದರೆ ಅವಕಾಶಗಳು ಇರುವದಿಲ್ಲ. ಅವರಿಗೂ ಸಹ ತಮ್ಮ ಕರ್ತವ್ಯದ ಜೊತೆಗೆ ಆಟೋಟಗಳಲ್ಲಿ ಪಾಲ್ಗೊಳ್ಳುವ ಅವಕಾಶಗಳು ಬೇಕು. ಈ ನಿಟ್ಟಿನಲ್ಲಿ ಅಗಡಿ ಇಂಜಿನಿಯರಿಂಗ್ ಕಾಲೇಜು ವಿವಿಧ ಕಾಲೇಜುಗಳ ಉಪನ್ಯಾಸಕರು ಮತ್ತು ಸಿಬ್ಬಂದಿಗಳಿಗೆ ವಾಲಿಬಾಲ್ ಪಂದ್ಯಾವಳಿ ಆಯೋಜಿಸಿರುವುದು ಶ್ಲಾಘನೀಯ ಎಂದರು.

ಈ ವೇಳೆ ವಿಟಿಯು ಬೆಳಗಾವಿ ವಿಭಾಗದ ದೈಹಿಕ ಶಿಕ್ಷಣ ನಿರ್ದೇಶಕ ಡಾ. ಮಂಜುನಾಥ್ ಡಿ, ಪ್ರೊ. ಈ.ಎಸ್. ಯಳ್ಳೂರ, ಪ್ರೊ. ಲಿಂಗರಾಜ್, ಕಾಲೇಜಿನ ಪ್ರಾಚಾರ್ಯ ಪರಶುರಾಮ ಬಾರಕಿ, ಪ್ರಾಚಾರ್ಯರಾದ ಶುಭಾ ಡಿ, ಪ್ರೊ. ವಿಕ್ರಂ ಶಿರೋಳ, ಡಾ. ಸುಭಾಸ್ ಮೇಟಿ, ಡಾ. ಆರ್.ಎಂ. ಪಾಟೀಲ, ರವಿಪ್ರಕಾಶ, ದೈಹಿಕ ನಿರ್ದೇಶಕ ಎಸ್.ಎಫ್. ಕೊಡ್ಲಿ, ಡಾ. ಸಂತೋಷ ಬುಜರಿ, ಡಾ. ಅರುಣ ಜೋಶಿ, ಉಪನ್ಯಾಸಕರಾದ ಸೋಮಶೇಖರ್ ಕೆರಿಮನಿ, ಪ್ರಕಾಶ್ ಹೊಂಗಲ, ಷಣ್ಮುಖ ಜಿ, ಮಲ್ಲಯ್ಯ ಹಿರೇಮಠ, ರಮೇಶ ಕೊಪ್ಪದ, ಲಕ್ಷ್ಮಣ ಪಾಟೀಲ, ರಮೇಶ ರೆಡ್ಡಿ, ಕಿರಣರೆಡ್ಡಿ ಸೇರಿ ಸಿಬ್ಬಂದಿಗಳು ಉಪಸ್ಥಿತರಿದ್ದರು.

ವಾಲಿಬಾಲ್ ಪಂದ್ಯಾವಳಿಯ ಅಂತಿಮ ಪಂದ್ಯದಲ್ಲಿ ರೋಚಕ ಹಣಾಹಣಿ ನಡೆದಿತ್ತು. ಹಳಿಯಾಳದ ವಿಡಿಐಟಿ ಇಂಜಿನಿಯರಿಂಗ್ ಕಾಲೇಜು ತಂಡದವರು ಧಾರವಾಡದ ಎಸ್‌ಡಿಎಂ ಇಂಜಿನಿಯರಿಂಗ್ ಕಾಲೇಜು ತಂಡವನ್ನು ಸೋಲಿಸಿ ವಿಜಯಶಾಲಿಯಾಯಿತು. ವಿಜೇತರಿಗೆ ಆಕರ್ಷಕ ಟ್ರೋಫಿ, ಪ್ರಮಾಣಪತ್ರ ವಿತರಿಸಲಾಯಿತು.

## ಅಕ್ಷಯ ಆಯುರ್ಧಾಮದ ಹಿರೇಮಠ ನ್ಯಾಚುರಲ್ಸ್ ಉದ್ಘಾಟನೆ, ಉಚಿತ ಆರೋಗ್ಯ ತಪಾಸಣಾ ಶಿಬಿರ

# ಆಯುರ್ವೇದ ಎಲ್ಲ ವೈದ್ಯ ಶಾಸ್ತ್ರಗಳ ತಾಯಿಬೇರು

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಾಚೀನ ಆಯುರ್ವೇದ ಪದ್ಧತಿಗಳೇ ವಿಶ್ವದ ಎಲ್ಲ ವೈದ್ಯಕೀಯ ಶಾಸ್ತ್ರಗಳ ತಾಯಿಬೇರಾಗಿದೆ ಎಂದು ಹೂವಿನಹಡಗಲಿಯ ಗವಿಮಠದ ಡಾ. ಹಿರಿಶಾಂತವೀರ ಮಹಾಸ್ವಾಮೀಜಿ ಪ್ರತಿಪಾದಿಸಿದರು.

ಇಲ್ಲಿಯ ಅಕ್ಷಯ ಆಯುರ್ಧಾಮದ ಹಿರೇಮಠ ಪಂಚಕರ್ಮ ಚಿಕಿತ್ಸಾ ಕೇಂದ್ರದಲ್ಲಿ ಜರುಗಿದ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಶ್ರೀಗಳು ಆಶೀರ್ವಚನ ನೀಡಿದರು.

ಪ್ರಸ್ತುತ ಮಾನವ ಜಂಜಾಟದಿಂದ ವಿವಿಧ ಕಾಯಿಲೆಗಳಿಗೆ ತುತ್ತಾಗುತ್ತಿದ್ದಾನೆ. ಕೆಟ್ಟ ಜೀವನ ಶೈಲಿಯಿಂದಾಗಿ ಕೆಲ ಮಾರಕ ರೋಗಗಳನ್ನು ಅಂಟಿಸಿಕೊಂಡು ತೊಂದರೆ ಅನುಭವಿಸುತ್ತಿದ್ದಾನೆ. ಈ ಕಾಯಿಲೆಗಳಿಗೆ ಪ್ರಾಚೀನ ಆಯುರ್ವೇದ ಪದ್ಧತಿಯಿಂದ ಚಿಕಿತ್ಸೆ ನೀಡಿದಲ್ಲಿ ಸಂಪೂರ್ಣವಾಗಿ ಗುಣಪಡಿಸಬಹುದಾಗಿದೆಯೆಂದು ಹೇಳಿದರು.

ಪ್ರಾಚೀನ ಭಾರತೀಯ ಮೂಲದ ಆಯುರ್ವೇದ ಪದ್ಧತಿ ಬಗ್ಗೆ ಪಾಶ್ಚಾತ್ಯ ದೇಶಗಳಲ್ಲಿ ವಿಪರೀತ ಆಸಕ್ತಿ ಮೂಡಿದೆ. ವಿದೇಶಗಳಲ್ಲಿ ಅನೇಕ ಭಾರತೀಯ ಮೂಲದ ಆಯುರ್ವೇದ ವೈದ್ಯರು ಕಾರ್ಯನಿರ್ವಹಿಸುವ ಮೂಲಕ ಭಾರತದ ಹಿರಿಮೆಯನ್ನು ಎತ್ತರಕ್ಕೇರಿಸಿದ್ದಾರೆ. ವಿಪರ್ಯಾಸವೆಂದರೆ ಆಯುರ್ವೇದದ ಮೂಲವಾಗಿರುವ ಭಾರತದಲ್ಲಿಯೇ ಆಯುರ್ವೇದ ಪದ್ಧತಿಯ ಬಗ್ಗೆ ಕೆಲವರು ಅಪಸ್ವರ ಎತ್ತುತ್ತಿದ್ದಾರೆಂದು ವಿಷಾದಿಸಿದರು.

ಆಲೋಪತಿ ಹಾಗೂ ಇತರ ವೈದ್ಯ ಪದ್ಧತಿಗಳಿಂದ ಗುಣಪಡಿಸಲಾಗದಂತಹ ಅನೇಕ ಅಸಾಧ್ಯ ರೋಗಗಳನ್ನು ಸಹ ಗುಣಪಡಿಸಿದ ಖ್ಯಾತಿ ಆಯುರ್ವೇದಕ್ಕಿದೆ. ಈ ಆಯುರ್ವೇದದ ಬಗ್ಗೆ ಸರಕಾರ, ಸಂಘ-ಸಂಸ್ಥೆಗಳು ಜನಸಾಮಾನ್ಯರಿಗೆ ತಿಳುವಳಿಕೆ ಮೂಡಿಸಬೇಕು. ಆಯುರ್ವೇದ ಔಷಧಿಗಳು ಅತೀ ಸುಲಭವಾಗಿ ಜನರಿಗೆ ದೊರೆಯುವಂತಾಗಬೇಕೆಂದು ಪ್ರತಿಪಾದಿಸಿದರು.

ಪ್ರಸ್ತುತ ಆಹಾರ ಪದ್ಧತಿಗಳಿಂದ ಮಾನವ ರೋಗಕ್ಕೆ ತುತ್ತಾಗುತ್ತಿದ್ದಾನೆ. ಆಯುರ್ವೇದ ಪದ್ಧತಿಯಲ್ಲಿ ತಿಳಿಸಿದಂತೆ ಆಯಾ ಋತುಮಾನಕ್ಕೆ ಅನುಸಾರವಾಗಿ ಆಹಾರ ಪದ್ಧತಿಗಳನ್ನು ರೂಢಿಸಿಕೊಂಡಲ್ಲಿ ಮಾನವ ನಿರೋಗಿಯಾಗಿ ಜೀವನ ನಿರ್ವಹಿಸಬಹುದಾಗಿದೆಯೆಂದು ಹೇಳಿದರು.

ಮಾನವರು ಒತ್ತಡದ ಜೀವನದಿಂದ ಮುಕ್ತರಾಗಲು ಆಯುರ್ವೇದದಲ್ಲಿ ಪ್ರತಿಪಾದಿಸಿದ ಸೂಕ್ತ ವ್ಯಾಯಾಮ, ಯೋಗ, ಧ್ಯಾನ, ಯಮ, ನಿಯಮಗಳಂತಹ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕು. ಆ ಮೂಲಕ ಪ್ರಾಚೀನ ಕಾಲದಲ್ಲಿದ್ದಂತೆ ಮಾನವ ಶತಾಯುಷಿಗಳಾಗುವಂತೆ ಆಶಿಸಿದರು.

ಈ ಸಂದರ್ಭದಲ್ಲಿ ಸುಮಾರು 500 ರೋಗಿಗಳಿಗೆ ರಕ್ತದೊತ್ತಡ, ಎಲುಬು ಸಾಂದ್ರತೆ, ಸಕ್ಕರೆ ರೋಗ, ಬೊಜ್ಜು, ನರರೋಗ, ಸಂಧಿವಾತ, ಚರ್ಮರೋಗ, ಸ್ತ್ರೀರೋಗಗಳಿಗೆ ಉಚಿತ ಚಿಕಿತ್ಸೆ ನೀಡಿ ಔಷಧಿಗಳನ್ನು ವಿತರಿಸಲಾಯಿತು.

ಶಿಬಿರದಲ್ಲಿ ಹಿರಿಯ ಆಯುರ್ವೇದ ತಜ್ಞ ಡಾ. ಮಹೇಶ ಹಿರೇಮಠ, ಸ್ತ್ರೀರೋಗ ತಜ್ಞೆ ಡಾ. ಸೌಮ್ಯಶ್ರೀ ಹಿರೇಮಠ ದಂಪತಿಗಳು ಚಿಕಿತ್ಸೆ ನೀಡಿದರು. ಡಾ. ವಿದ್ಯಾ ಹಿರೇಮಠ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ಡಾ. ಎಸ್.ಆರ್. ಹಿರೇಮಠ, ಡಾ. ಶರಣಬಸವರಾಜ, ಡಾ. ಅನೂಷಾ, ಡಾ. ವಿಜಯಲಕ್ಷ್ಮಿ ಹಿರೇಮಠ, ನಿವೃತ್ತ ತಹಸೀಲ್ದಾರ ಅಂದಪ್ಪ ನರೇಗಲ್, ಉದ್ಯಮಿ ಅನಿಲಕುಮಾರ ಕಡಾಡಿ, ಕೆ.ಬಿ. ಕೊಣ್ಣೂರು, ಡಾ. ಚಂದ್ರು ಹೊಸಮಠ, ಡಾ. ಪ್ರತೀಕ, ಡಾ. ನವೀನ ಬಡಿಗೇರ, ಸಂಜೀವ ಹಡಗಲಿಮಠ, ಶ್ರೀಕಾಂತ, ಶಿವಾನಂದ, ರಾಜಶೇಖರಗೌಡ ಅಯ್ಯನಗೌಡರ, ಡಾ. ಆನಂದ, ಡಾ. ಸುಮಿತ್, ಡಾ. ಕಿರಣ, ಡಾ. ಚಿನ್ಮಯ, ಡಾ. ರವಿ ಮುಂತಾದವರು ಪಾಲ್ಗೊಂಡಿದ್ದರು.

ಡಾ. ಮಹೇಶ ಹಿರೇಮಠ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕೆ.ಬಿ. ಕೊಣ್ಣೂರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.




ಅಕ್ಷಯ ಆಯುರ್ಧಾಮದ ಹಿರೇಮಠ ಪಂಚಕರ್ಮ ಚಿಕಿತ್ಸಾ ಕೇಂದ್ರದ ಮುಖ್ಯಸ್ಥೆ ಡಾ. ಸೌಮ್ಯಶ್ರೀ ಹಿರೇಮಠ ಮಾತನಾಡಿ, ಪ್ರಾಚೀನ ಆಯುರ್ವೇದ ಪದ್ಧತಿಗಳ ಬಗ್ಗೆ ಜನರಲ್ಲಿರುವ ಕೆಲ ತಪ್ಪು ಕಲ್ಪನೆಗಳನ್ನು ದೂರ ಮಾಡುವದಕ್ಕಾಗಿ ಈ ಶಿಬಿರವನ್ನು ಏರ್ಪಡಿಸಿದ್ದೇವೆ. ಈ ಕೇಂದ್ರದಲ್ಲಿ ಜನಸಾಮಾನ್ಯರ ಕೈಗೆಟಕುವಂತೆ ನಾಮಮಾತ್ರ ಶುಲ್ಕ ವಿಧಿಸಿ ಪ್ರಾಚೀನ ಪಂಚಕರ್ಮ ಚಿಕಿತ್ಸೆಗಳನ್ನು ನೀಡಲಾಗುವದೆಂದು ವಿವರಿಸಿದರು.

## ದಂಡವ್ವ ಯಲಿ ಪ್ರೌಢಶಾಲೆಯಲ್ಲಿ ಮಕ್ಕಳ ಗ್ರಾಮಸಭೆ

# ಮಕ್ಕಳ ಹಕ್ಕುಗಳನ್ನು ಗೌರವಿಸಿ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪ್ರತಿಯೊಬ್ಬರೂ ಮಕ್ಕಳ ಹಕ್ಕುಗಳನ್ನು ಗೌರವಿಸಬೇಕು ಎಂದು ಹಾವೇರಿ ಕ್ರೈಂ ವಿಭಾಗದ ಸಿಪಿಐ ಶಿವಶಂಕರ ಗಣಾಚಾರಿ ತಿಳಿಸಿದರು.

ಅವರು ಪಟ್ಟಣದ ಸಮಿಪದ ಯಲಿಶಿರುಂದ ಗ್ರಾ.ಪಂ, ಸ್ಪಂದನಾ ಸಂಸ್ಥೆ ಹಾಗೂ ದಂಡವ್ವ ಯಲಿ ಸರಕಾರಿ ಪ್ರೌಢಶಾಲೆಯ ಸಹಭಾಗಿತ್ವದಲ್ಲಿ ದಂಡವ್ವ ಯಲಿ ಪ್ರೌಢಶಾಲೆಯಲ್ಲಿ ನಡೆದ ಮಕ್ಕಳ ಗ್ರಾಮ ಸಭೆ ಹಾಗೂ ಮಕ್ಕಳ ಹಕ್ಕುಗಳ ಸಭೆ ಉದ್ದೇಶಿಸಿ ಮಾತನಾಡಿದರು.

ಲೈಂಗಿಕ ದೌರ್ಜನ್ಯದಿಂದ ಮಕ್ಕಳ ಸಂರಕ್ಷಣೆ ಕಾಯಿದೆ-2012 ಜಾರಿಯಲ್ಲಿದ್ದು, ಇದರ ಪ್ರಕಾರ 18 ವರ್ಷದೊಳಗಿನ ಹೆಣ್ಣು ಹಾಗೂ ಗಂಡುಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ತಡೆಗಟ್ಟುವುದು ಇದರ ಉದ್ದೇಶವಾಗಿದೆ. ಕಾನೂನು ಮೀರಿ ನಡೆದುಕೊಳ್ಳುವ ಅಪರಾಧಿಗೆ ಕಠಿಣ ಜೈಲು ಶಿಕ್ಷೆ ನಿಡಲಾಗುತ್ತದೆ ಎಂದರು.

ಸಹಾಯಕ ಶಿಶು ಅಭಿವೃದ್ಧಿ ಅಧಿಕಾರಿ ಮಂಜುಳಾ ಕಮತ ಮಾತನಾಡಿ, ಮಕ್ಕಳ ನಾಲ್ಕು ಪ್ರಮುಖ ಹಕ್ಕುಗಳಾದ ಬದುಕುವ ಹಕ್ಕು, ಅಭಿವೃದ್ಧಿ ಹಾಗೂ ವಿಕಾಸ ಹೊಂದುವ ಹಕ್ಕು, ಶೋಷಣೆಯ ವಿರುದ್ಧ ಸಂರಕ್ಷಣೆ ಹಕ್ಕು, ಭಾಗವಹಿಸುವ ಹಕ್ಕುಗಳನ್ನು ಮಕ್ಕಳು ಹೊಂದಿದ್ದು, ಮಕ್ಕಳು ಯಾವುದೇ ಸಮಸ್ಯೆ ಆದಲ್ಲಿ ತಕ್ಷಣವೇ ಮಕ್ಕಳ ಹಕ್ಕುಗಳ ಸಹಾಯವಾಣಿ-1098ಕ್ಕೆ ಕರೆ ಮಾಡಿ ತಿಳಿಸಿದಲ್ಲಿ ತಕ್ಷಣವೇ ಮಕ್ಕಳ ನೆರವಿಗೆ ಬರುತ್ತೇವೆ ಎಂದರು.

ಪಿಡಿಓ ಶಿವಕುಮಾರ ವಾಲಿ, ಗ್ರಾ.ಪಂ ಅಧ್ಯಕ್ಷ ಪರಶುರಾಮ ಹೂಗಾರ, ಉಪಾಧ್ಯಕ್ಷೆ ಅಲ್ಲಾಭಿ ನದಾಫ್, ಚಂದ್ರಪ್ಪ ಕಪ್ಪತ್ತನವರ, ಮಂಜುನಾಥ ಭಜಂತ್ರಿ, ಶರಣಪ್ಪ ಡೋಣಿ, ರಾಜೇಶ್ವರಿ ಕೊಟಗಿ, ಶಿವಪುತ್ರವ್ವ ಭರಮನಾಯಕ, ಕವಿತಾ ಹೊನ್ನಪ್ಪನವರ, ನೀಲಪ್ಪ ಮಾಲಿಂಗಪೂರ, ಯಲ್ಲವ್ವ ವಡ್ಡರ, ರೇಣವ್ವ ಪ್ಯಾಟಿ, ರೇಣವ್ವ ಡಂಬ್ರಳ್ಳಿ, ಪಾಂಡಪ್ಪ ರಾಮಗೇರಿ, ಚನ್ನಬಸವ್ವ ದಂಡಿನ, ಶಿವಯ್ಯ ಮನಿಗೇರಿ, ಮುದುಕಪ್ಪ ಮುಳಗುಂದ, ಪಾರ್ವತೆವ್ವ ಕಲ್ಯಾಣಿ, ನಾಗವ್ವ ಕುರ್ತಕೋಟಿ, ಶೇಖಪ್ಪ ಕಟ್ಟಿಮನಿ, ಪ್ರಕಾಶ ಬೋರಣಿ, ಪ್ರಧಾನ ಗುರು ಆರ್.ಎಸ್. ಜಾಲರೆಡ್ಡಿ, ಜಿ.ಎಸ್. ದಿನ್ನಿ, ಬಿ.ಎಸ್. ಲಮಾಣಿ, ಸಿ.ಎಸ್. ಜೋಗಿನ, ಎಸ್.ಕೆ. ಹಿರೇಮಠ, ಎಂ.ಆರ್. ಪೂಜೇರಿ ಇದ್ದರು.

# ಪ್ರಶಸ್ತಿಗಾಗಿ ಪುಸ್ತಕಗಳ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಬಾಲ ವಿಕಾಸ ಅಕಾಡೆಮಿಯು 2024ನೇ ಸಾಲಿನ (ಅಂದರೆ ಜನವರಿ 2024 ರಿಂದ ಡಿಸೆಂಬರ್ 2024) ಹಾಗೂ 2025ನೇ (ಅಂದರೆ ಜನವರಿ- 2025 ರಿಂದ ಡಿಸೆಂಬರ್-2025) ಸಾಲಿನಲ್ಲಿ ಮಕ್ಕಳ ಕ್ಷೇತ್ರದಲ್ಲಿ ರಚಿಸಲ್ಪಟ್ಟ ಆಯ್ದ ಉತ್ತಮ ಪುಸ್ತಕಗಳಿಗೆ "ಮಕ್ಕಳ ಪುಸ್ತಕ ಚಂದಿರ ಪ್ರಶಸ್ತಿ"ಯನ್ನು ಪ್ರದಾನ ಮಾಡಲು ಉದ್ದೇಶಿಸಲಾಗಿದೆ. 2024ನೇ ಸಾಲಿನ ಹಾಗೂ 2025ನೇ ಸಾಲಿನ ಅವಧಿಯಲ್ಲಿ ಜನವರಿಯಿಂದ ಡಿಸೆಂಬರ್ ತಿಂಗಳ ಅಂತ್ಯದ ಅವಧಿಯಲ್ಲಿ ಪ್ರಕಟಗೊಂಡ ಸ್ವ ರಚಿತ ಕವನ ಸಂಕಲನ, ಕಥಾ ಸಂಕಲನ. ನಾಟಕ, (ಪಠ್ಯಾಧಾರಿತ ಬಿಟ್ಟು) ಮಕ್ಕಳ ಕಾದಂಬರಿ, ವೈಜ್ಞಾನಿಕ ಲೇಖನಗಳ ಸಂಕಲನ, ಅನುವಾದಿತ ಕೃತಿ (ಯಾವುದೇ ಪ್ರಕಾರದ ಮಕ್ಕಳ ಸಾಹಿತ್ಯ) ಮಕ್ಕಳ ಸಾಹಿತ್ಯ ವಿಮರ್ಶಾ ಕೃತಿ ಹೀಗೆ ಏಳು ಪ್ರಕಾರದ ಮಕ್ಕಳ ಸಾಹಿತ್ಯದ ಕೃತಿಗಳನ್ನು ಪ್ರಶಸ್ತಿಗಾಗಿ ಆಹ್ವಾನಿಸಲಾಗಿದೆ.

ಆದ್ದರಿಂದ ಈ ಮೇಲ್ಕಾಣಿಸಿದ ಕ್ಷೇತ್ರಗಳಲ್ಲಿ ಪ್ರಕಟಗೊಂಡ ಪುಸ್ತಕಗಳನ್ನು ಯಾವ ಸಾಲಿಗೆ ಪರಿಗಣಿಸಬೇಕೆಂಬುದರ ಬಗ್ಗೆ ಸ್ಪಷ್ಟವಾಗಿ ನಮೂದಿಸಲು ತಿಳಿಸಿದೆ ಹಾಗೂ ಪ್ರಶಸ್ತಿಗಾಗಿ ಪರಿಗಣಿಸಲು/ಮೌಲ್ಯಮಾಪನಗೊಳಿಸಲು ಪ್ರತಿಯೊಂದು ಕೃತಿಯ 4 ಪ್ರತಿಗಳನ್ನು ಹಾಗೂ ಸ್ವ-ವಿರಗಳನ್ನೊಳಗೊಂಡ ಮನವಿಯೊಂದಿಗೆ ಫೆಬ್ರವರಿ 20 ರೊಳಗಾಗಿ ಅಕಾಡೆಮಿಯ ಕೇಂದ್ರ ಕಚೇರಿ ವಿಳಾಸಕ್ಕೆ ಸಲ್ಲಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಕೇಂದ್ರ ಕಚೇರಿ ವಿಳಾಸ: ಯೋಜನಾಧಿಕಾರಿಗಳು, ಚಂದ್ರಿಕಾ ಲೇ ಔಟ್ ಹಿಂಬಾಗ, ಕೆ.ಎಚ್.ಬಿ. ಕಾಲೋನಿ ಲಕಮನಹಳ್ಳಿ-ಧಾರವಾಡ -580004 ದೂರವಾಣಿ ಸಂಖ್ಯೆ :0836-2465490

ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಲು ಮೊಬೈಲ್ ಸಂಖ್ಯೆಗಳು 8050392209, 7204396275, 9448981944


# ಜಾಕೀರ್‌ಹುಸೇನರ ಚಿತ್ರಕಲಾ ಪ್ರದರ್ಶನ

■ವಿಜಯಸಾಕ್ಷಿ ಸುದ್ದಿ, ಗದಗ

ಮಹಾರಾಷ್ಟ್ರದ ಮುಂಬೈ ಆರ್ಟ್ ಗ್ರೂಪ್ ಸಿ.ಎಸ್.ಎಂ.ಟಿ ಕಲಾ ಗ್ಯಾಲರಿಯಲ್ಲಿ ಜಾಕೀರ್‌ಹುಸೇನ ಕೊರ್ಲಹಳ್ಳಿ ಅವರ ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನವನ್ನು ಹಮ್ಮಿಕೊಂಡಿತ್ತು.

ಪ್ರದರ್ಶನಕ್ಕೆ ಮಹಾರಾಷ್ಟ್ರದ ಹಿರಿಯ ಕಲಾವಿದರಾದ ಸತೀಶ ಲೂನಾವಾಲಾ ಮತ್ತು ಅಪ್ಪಾನಾ ರಾಥೋಡ್ ಚಾಲನೆ ನೀಡಿ, ಕಲಾವಿದ ಜಾಕೀರಹುಸೇನ ಕೊರ್ಲಹಳ್ಳಿ ಅವರ ಕಲಾಕೃತಿಗಳಲ್ಲಿ ಇಂಪ್ರೆಸಿಸಂ ಶೈಲಿಯಲ್ಲಿ ನೋಡುವವರ ಗಮನ ಸೆಳೆಯುತ್ತಿದ್ದು, ಇವರ ಕಲಾಕೃತಿಗಳಲ್ಲಿ ವರ್ಮ ಬಣ್ಣಗಳ ಮಹತ್ವ ಹೆಚ್ಚು ಕಾಣುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮುಂಬೈಯ ಕಲಾವಿದರಾದ ಜಾನ್ ಅಬ್ಬಾಸ್, ಅರವಿಂದ ಕುಮಾರ, ಮೊಹಮ್ಮದ್ ಅಲಿ ಸತ್ತಾರ, ರಿದಾಖಾನ, ವಿ.ವಿ. ಚೌದ್ರಿ, ಮೊಹಮ್ಮದ್ ಜಫರ್ ಹಾಗೂ ಮುಂಬೈ ಆರ್ಟ್ ಗ್ರೂಪಿನ ಕಲಾವಿದರು, ಕಲಾ ಸಂಗ್ರಹಕರು, ಕಲಾ ಪ್ರೇಮಿಗಳು ಹಾಜರಿದ್ದರು.



# ನಿಧನ

## ಜಹಾಂಗೀರಖಾನ ಹಾಶೀಮನವರ



**ಅಣ್ಣಿಗೇರಿ :** ಪಟ್ಟಣದ ರೈಲ್ವೆ ಸ್ಟೇಶನ್ ಓಣಿಯ ಹಿರಿಯರಾದ ಜಹಾಂಗೀರಖಾನ ಇಮಾಮಖಾನ ಹಾಶೀಮನವರ (78) ಬುಧವಾರ ನಿಧನರಾದರು. ಅವರಿಗೆ ಪತ್ನಿ, ಮೂವರು ಪುತ್ರರು ಸೇರಿದಂತೆ ಅಪಾರ ಬಂಧು-ಬಳಗವಿದೆ.

ಮೃತರ ಅಂತ್ಯಕ್ರಿಯೆ ಗುರುವಾರ ಮುಂಜಾನೆ 8 ಗಂಟೆಗೆ ಸ್ಥಳೀಯ ಖಬರಸ್ಥಾನದಲ್ಲಿ ನಡೆಯಲಿದೆ ಎಂದು ಕುಟುಂಬದ ಸದಸ್ಯರು ತಿಳಿಸಿದ್ದಾರೆ.

# ಶ್ರೀ ದ್ಯಾಮವ್ವದೇವಿ ಜಾತ್ರಾ ಮಹೋತ್ಸವ ಸಿಂಗಾರಗೊಂಡ ಶಿಗ್ಲಿ ಗ್ರಾಮ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮೀಪದ ಶಿಗ್ಲಿ ಗ್ರಾಮದ ಐತಿಹಾಸಿಕ ಗ್ರಾಮದೇವತೆ ಶ್ರೀ ದ್ಯಾಮವ್ವದೇವಿ ದೇವಸ್ಥಾನದ ಜಾತ್ರಾ ಮಹೋತ್ಸವದ ಹಿನ್ನೆಲೆಯಲ್ಲಿ ಇಡೀ ಗ್ರಾಮವೇ ಸಿಂಗಾರಗೊಂಡು ಹಬ್ಬದ ವಾತಾವರಣ ನಿರ್ಮಾಣಗೊಂಡಿದೆ.

ದೇವಸ್ಥಾನ ಜೀರ್ಣೋದ್ಧಾರ ಮತ್ತು ಮೂರ್ತಿ ಪುನರ್ ಪ್ರತಿಷ್ಠಾಪನೆ ಹಿನ್ನೆಲೆಯಲ್ಲಿ ಗ್ರಾಮದೇವಿ ದ್ಯಾಮವ್ವನ ಮೂರ್ತಿಗೆ ಬಣ್ಣ ಲೇಪನ ಮಾಡಿಸಲಾಗಿದೆ. ಮಂಗಳವಾರ ಶ್ರೀ ದೇವಿಗೆ ಕಲಾವೃದ್ಧಿ ಮಾಡಲಾಯಿತು. ರಾತ್ರಿ ಶೃಂಗರಿಸಿದ ರಥದಲ್ಲಿ ಸಕಲ ವಾದ್ಯ ವೈಭವ, ಪಟಾಕಿಗಳ ಚಿತ್ತಾರದಗಳೊಂದಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಾಗಿ ಚೌತಮನೆ ಕಟ್ಟಿಯಲ್ಲಿ ಪ್ರತಿಷ್ಠಾಪಿಸಲಾಯಿತು.

ಚಂಡೆ-ಮದ್ದಳೆ, ಬೃಹತ್ ಆಕಾರದ ವೇಷಭೂಷಣಗಳು, ಡೊಳ್ಳು ಸೇರಿದಂತೆ ಸಕಲ ವಾದ್ಯ ವೈಭವ, ಪೂರ್ಣಕುಂಭಗಳೊಂದಿಗೆ ಮೆರವಣಿಗೆ ಗ್ರಾಮದ ಬೀದಿಗಳಲ್ಲಿ ಸಂಚರಿಸಿತು. ಈ ವೇಳೆ ಶಿಗ್ಲಿ ಗ್ರಾಮದ ಪ್ರತಿಯೊಂದು ಮನೆಯವರು ಪಾಲ್ಗೊಂಡಿದ್ದು ವಿಶೇಷವಾಗಿತ್ತು.

ಭಕ್ತರು ಇಡೀ ಗ್ರಾಮದಲ್ಲಿ ಮನೆಯ ಮುಂದೆ ರಂಗೋಲಿ ಹಾಕಿ ತಳಿರು-ತೋರಣಗಳನ್ನು ಕಟ್ಟಿ ಭಕ್ತಿಯಿಂದ ನಮಿಸಿ ದೇವಿಯನ್ನು ಬರಮಾಡಿಕೊಂಡರು. ಜ. 29ರಂದು ಶ್ರೀ ದೇವಿ ಗಡಿ ಹೋಗುವದು, ಜ. 30ರಂದು ಬ್ರಾಹ್ಮೀ ಮುಹೂರ್ತದಲ್ಲಿ ಶ್ರೀ ದೇವಿಯನ್ನು ಗರ್ಭಗುಡಿಯಲ್ಲಿ ಪುನರ್ ಪ್ರತಿಷ್ಠಾಪಿಸುವದು, ಉಡಿ ತುಂಬುವದು ಸೇರಿದಂತೆ ವಿವಿಧ ಧಾರ್ಮಿಕ ಸಂಪ್രದಾಯಗಳು ನಡೆಯಲಿವೆ ಎಂದು ದೇವಸ್ಥಾನದ ಕಮಿಟಿಯವರು ತಿಳಿಸಿದ್ದಾರೆ.

### ಬಸವ ಯೋಗ ಮಂದಿರದಲ್ಲಿ ರಥಸಪ್ತಮಿ ಆಚರಣೆ ಕಾರ್ಯಕ್ರಮದಲ್ಲಿ ಡಾ. ಎಂ.ವಿ. ಐಹೊಳ್ಳಿ ಅಭಿಪ್ರಾಯ

# ಸೂರ್ಯ ನಮಸ್ಕಾರ ಸಾಧನೆಯಿಂದ ಆರೋಗ್ಯ ಭಾಗ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಆರೋಗ್ಯ ಸಂಪತ್ತಿಗಿಂತ ಮಿಗಿಲಾದ ಸಂಪತ್ತು ಬೇರೊಂದಿಲ್ಲ. ಆಸ್ತಿ-ಪಾಸ್ತಿ, ಧನ-ಕನಕಾದಿಗಳ ಸಂಪತ್ತನ್ನು ನಾವು ವ್ಯವಹಾರಿಕವಾಗಿ ಗಳಿಸಬಹುದು. ಆದರೆ ಆರೋಗ್ಯ ಸಂಪತ್ತನ್ನು ಗಳಿಸಲು ನಾವು ಸ್ವತಃ ಸಾಧನೆ ಮಾಡಬೇಕಾಗುತ್ತದೆ. ಸಾಧನೆ ಸಾಕಷ್ಟಿದ್ದರೂ ಸೂರ್ಯನಮಸ್ಕಾರ ಸಾಧನೆ ಸರ್ವಶ್ರೇಷ್ಠವಾಗಿದೆ ಎಂದು ಡಿ.ಜಿ.ಎಂ ಆಯುರ್ವೇದಿಕ್ ಮೆಡಿಕಲ್ ಕಾಲೇಜಿನ ನಿವೃತ್ತ ಪ್ರಾಧ್ಯಾಪಕ ಡಾ. ಎಂ.ವಿ. ಐಹೊಳ್ಳಿ ಅಭಿಪ್ರಾಯಪಟ್ಟರು.



ಎಸ್.ವಾಯ್.ಬಿ.ಎಂ.ಎಸ್ ಯೋಗಪಾಠಶಾಲೆಯ ಬಸವ ಯೋಗ ಮಹಾವಿದ್ಯಾಲಯ ಮತ್ತು ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ ಮತ್ತು ಯೋಗ ಚಿಂತನ ಕೂಟ ಗದಗ ಇವರುಗಳ ಸಂಯುಕ್ತಾಶ್ರಯದಲ್ಲಿ ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರದಲ್ಲಿ ರಥಸಪ್ತಮಿ ಆಚರಣೆ ಪ್ರಯುಕ್ತ ಆಯೋಜಿಸಿದ್ದ ಸಾಮೂಹಿಕ ಸೂರ್ಯನಮಸ್ಕಾರ ಯಜ್ಞ ಮತ್ತು ಸೂರ್ಯಾಷ್ಟೋತ್ತರ ಶತನಾಮಾವಳಿ ಪಠಣ ಕಾರ್ಯಕ್ರಮಗಳ ನೇತೃತ್ವ ವಹಿಸಿ ಅವರು ಮಾತನಾಡಿದರು.

ಸೂರ್ಯ ನಮಸ್ಕಾರವು ಯೋಗದ ಪ್ರಕ್ರಿಯೆಗಳಾದ ಆಸನ, ಪ್ರಾಣಾಯಾಮ, ಧ್ಯಾನ, ಮಂತ್ರ ಪಠಣಗಳ ಸಂಯೋಜನೆಯುಕ್ತ 12 ಹಂತಗಳ ವ್ಯಾಯಾಮ ಪದ್ಧತಿಯಾಗಿದೆ. ಆಧ್ಯಾತ್ಮಿಕವಾಗಿ ಸೂರ್ಯದೇವನಿಗೆ ವಂದನೆ ಸಲ್ಲಿಸುವುದು ಧಾರ್ಮಿಕ ಆಚರಣೆಯಾಗಿದೆ. ಈ ಸೂರ್ಯನಮಸ್ಕಾರ ಸಾಧನೆಯಿಂದ ನಾವು ದೈಹಿಕ, ಮಾನಸಿಕ, ಆಧ್ಯಾತ್ಮಿಕ, ಭಾವನಾತ್ಮಕ, ನೈತಿಕ ಮತ್ತು ಸಾಮಜಿಕವಾಗಿ ಆರೋಗ್ಯವಂತ 'ರಾಗಿರಬಹುದು. ಹೀಗಾಗಿ ಸೂರ್ಯ ನಮಸ್ಕಾರ ಸಾಧನೆ ಆರೋಗ್ಯ ಭಾಗ್ಯದ ಅಡಿಪಾಯವಾಗಿದೆ ಎಂದರು.

ಎಲ್.ಟಿ.ಎಂ.ಎಸ್ ಹೆಸ್ಕಾಂನ ಅಸಿಸ್ಟಂಟ್ ಇಂಜಿನಿಯರ್ ಸುನಿತಾ ಓಲಿ ರಥಸಪ್ತಮಿ ದಿನ ಪ್ರಾರಂಭಿಸಿದ ಕಾರ್ಯಗಳ ಫಲ ಏಳು ಪಟ್ಟು ಹೆಚ್ಚುವದೆಂದು ತಿಳಿಸಿದರು. ರಥಸಪ್ತಮಿ ಮತ್ತು ಸೂರ್ಯನಮಸ್ಕಾರ ಕುರಿತು ಅಶೋಕ ಬಾರಕೇರ, ವಿಜಯಲಕ್ಷ್ಮೀ ಆನೆಹೊಸೂರ, ಮಂಜುಳಾ ಬುಳ್ಳಾ, ವಿಜಯಾ ಚನ್ನಶೆಟ್ಟಿ, ಗೌರಿ ಜಿರಂಕಳಿ ಮಾತನಾಡಿದರು. ವೀಣಾಶ್ರೀ ಮಾಲಿಪಾಟೀಲ ಸೂರ್ಯ ದೇವರ ಮಹತ್ವ ತಿಳಿಸುವ ಗೀತೆ ಹಾಡಿದರು.

ಕಾರ್ಯಕ್ರಮದಲ್ಲಿ ಭಾಗಿಯಾದ ನಿವೃತ್ತ ಮುಖ್ಯೋಪಾಧ್ಯಾಯ ಶಿವನಗೌಡ ಗೌಡರ ಸೂರ್ಯಾಷ್ಟೋತ್ತರ ಶತನಾಮಾವಳಿಯನ್ನು ಪಠಣ ಮಾಡಿಸಿ ಯೋಗ ಗಾರುಡಿಗರಾದ ಮಲ್ಲಾಡಿಹಳ್ಳಿ ದಿ. ಶ್ರೀ ರಾಘವೇಂದ್ರ ಸ್ವಾಮಿಗಳು ಮಾಡಿದ ಸೂರ್ಯನಮಸ್ಕಾರ ಸಾಧನೆಯನ್ನು ಪರಿಚಯಿಸಿದರು.

ಕಾರ್ಯಕ್ರಮದಲ್ಲಿ ಇ. ಪ್ರಶಾಂತ, ಜಯಶ್ರೀ ದಾವಣಗೇರಿ, ವೀಣಾ ಗೌಡರ, ರೇಷ್ಮಾ ಹಡಪದ, ಗಿರಿಜಾ ಅಂಗಡಿ ಸೇರಿದಂತೆ ಯೋಗಪಾಠಶಾಲೆಯ ಸದಸ್ಯರು ಪಾಲ್ಗೊಂಡಿದ್ದರು. ಪ್ರಾರಂಭದಲ್ಲಿ ಪ್ರಾಥನೆ, ಸಾಮೂಹಿಕ ಸೂರ್ಯ ನಮಸ್ಕಾರ ಯಜ್ಞ ನಡೆದವು. ಷಡಕ್ಷರಿ ಮೆಣಸಿನಕಾಯಿ ಸರ್ವರನ್ನು ಸ್ವಾಗತಿಸಿದರು. ಬಸವ ಯೋಗ ಮಹಾವಿದ್ಯಾಲಯದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ಪ್ರಾಸ್ತಾವಿಕ ನುಡಿಗಳನ್ನಾಡಿದರು. ರವಿ ಹುಡೇದ ಕಾರ್ಯಕ್ರಮ ನಿರೂಪಿಸಿದರು.ಸುಲೋಚನಾ ಐಹೊಳ್ಳಿ ವಂದಿಸಿದರು.

# ಬಸವರಾಜ ಬೊಮ್ಮಾಯಿಯವರ ಕೊಡುಗೆ ಅನನ್ಯ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಾಜಿ ಮುಖ್ಯಮಂತ್ರಿ, ಹಾಲಿ ಸಂಸದ ಬಸವರಾಜ ಬೊಮ್ಮಾಯಿ ಅವರ ಜನ್ಮದಿನದ ಪ್ರಯುಕ್ತ ಬುಧವಾರ ಪಟ್ಟಣದ ಶ್ರೀ ಸಾಲೇಶ್ವರ ಕಲ್ಯಾಣ ಮಂಟಪದಲ್ಲಿ ಉಚಿತ ಆರೋಗ್ಯ ತಪಾಸಣೆ ಹಾಗೂ ಔಷಧಿ ವಿತರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಲಕ್ಷ್ಮೇಶ್ವರ ತಾಲೂಕಾ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ಅಧ್ಯಕ್ಷ ಮಂಜುನಾಥ ಮಾಗಡಿ ಮಾತನಾಡಿ, ಕನ್ನಡ ನಾಡಿನ ನೆಲ, ಜಲ, ಭಾಷೆ ರಕ್ಷಣೆ ಜೊತೆಗೆ ನಾಡಿನ ಸರ್ವತೋಮುಖ ಅಭಿವೃದ್ಧಿಗೆ ಶ್ರೇಷ್ಠವಾದ ಕೊಡುಗೆಗಳನ್ನು ಮಾಜಿ ಮುಖ್ಯಮಂತ್ರಿಗಳಾದ ಬಸವರಾಜ ಬೊಮ್ಮಾಯಿ ನೀಡಿದ್ದಾರೆ. ನಮ್ಮ ರಾಜ್ಯ, ರಾಷ್ಟ್ರದ ಸೇವೆ ಮಾಡಲು ದೇವರು ಅವರಿಗೆ ಆಯುರಾರೋಗ್ಯ ನೀಡಲಿ ಎಂದರು.

ಗಿರಿಜಾ ಬಸವ ಆಸ್ಪತ್ರೆ ಹಾಗೂ ಜಿಮ್ಸ್‌ನ ಡಾ. ಪ್ರಕಾಶ ಹೊಸಮನಿ ನೇತೃತ್ವದ ವೈದ್ಯರ ತಂಡದಿಂದ ಹಲವಾರು ಜನರ ಅರೋಗ್ಯ ತಪಾಸಣೆ ಮಾಡಿಸಿಕೊಂಡು ಉಚಿತ ಔಷಧಿ ಪಡೆದರು. ಪಕ್ಷದ ಮುಖಂಡರಾದ ಚಂಬಣ್ಣ ಬಾಳಿಕಾಯಿ, ದೇವಣ್ಣ ಬಳಿಗಾರ, ಸೋಮಣ್ಣ ಡಾಣಗಲ್, ಎಂ.ಎಸ್. ದೊಡ್ಡಗೌಡ್ರ, ರವಿಕಾಂತ ಅಂಗಡಿ, ಹೊನ್ನಪ್ಪ ವಡ್ಡರ, ಅಶೋಕ ನಿರಾಲೋಟಿ, ಬಸವರಾಜ ಉಮಚಗಿ, ಸುಭಾನಸಾಬ ಹೊಂಬಳ, ಬಸವರಾಜ ಜಾಲಗಾರ, ಮುತ್ತು ನೀರಲಗಿ, ರಾಜು ಲಿಂಬಿಕಾಯಿ, ಮಾಂತೇಶ ಉಮಚಗಿ, ಮಲ್ಲಿಕಾರ್ಜುನ ನಿರಾಲೋಟಿ, ಚಂದ್ರು ಮಾಗಡಿ ಮುಂತಾದವರಿದ್ದರು.

# ಮೀನುಗಾರಿಕೆ ಇಲಾಖೆಯಿಂದ ಸಹಾಯಧನಕ್ಕೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025-2026ನೇ ಸಾಲಿನ ಗದಗ ಜಿಲ್ಲೆಯ ಮೀನುಗಾರಿಕೆ ಇಲಾಖೆಯಿಂದ ಜಿಲ್ಲಾ ವಲಯದ ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ ಯೋಜನೆಯಡಿ ಮೀನು ಕೃಷಿಗೆ ಸಹಾಯಧನ (ಕೊಳ ನಿರ್ಮಾಣ ಮತ್ತು ಹೂಡಿಕೆ ವೆಚ್ಚ) ನೀಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ದಿನಾಂಕ: 04/02/2026 ರೊಳಗಾಗಿ ಮೀನುಗಾರಿಕೆ ಸಹಾಯಕ ನಿರ್ದೇಶಕರು ಗದಗ/ಮುಂಡರಗಿ ಕಚೇರಿಗಳಲ್ಲಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಉಪ ನಿರ್ದೇಶಕರು ಗದಗ ಅಥವಾ ಮೀನುಗಾರಿಕೆ ಸಹಾಯಕ ನಿರ್ದೇಶಕರು ಗದಗ/ಮುಂಡರಗಿ (ಮೊಬೈಲ್ ಸಂ: 8095792530) ರವರನ್ನು ಸಂಪರ್ಕಿಸಲು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಸ್ಸಾಂ ಎಸ್‌ಐಆರ್‌ನಲ್ಲಿ 5 ಲಕ್ಷ 'ಮಿಯಾ'ಗಳ ಹೆಸರು ಅಳಿಸಲಾಗುವುದು, ಅವರಿಗೆ ತೊಂದರೆ ಕೊಡುವುದೇ ನನ್ನ ಕೆಲಸ : ಸಿಎಂ ಹಿಮಂತ ಬಿಸ್ವಾ ಶರ್ಮಾ

■ವಿಜಯಸಾಕ್ಷಿ ಸುದ್ದಿ, ಅಸ್ಸಾಂ

ರಾಜ್ಯದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಕೈಗೆತ್ತಿಕೊಂಡಾಗ ನಾಲ್ಕರಿಂದ ಐದು ಲಕ್ಷ 'ಮಿಯಾ ಮತದಾರರ' ಹೆಸರುಗಳನ್ನು ಅಳಿಸಲಾಗುವುದು, ಅವರಿಗೆ ತೊಂದರೆ ಕೊಡುವುದೇ ನನ್ನ ಕೆಲಸ ಎಂದು ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಹೇಳಿದ್ದಾರೆ. ಈ ಮೂಲಕ ಸಾಂವಿಧಾನಿಕ ಹುದ್ದೆಯಲ್ಲಿರುವ ವ್ಯಕ್ತಿ ಒಂದು ಸಮುದಾಯದ ಜನರ ವಿರುದ್ಧ ನೇರ ದ್ವೇಷ ಕಾರಿದ್ದಾರೆ.

"ನಮಗೆ ಮತಗಳ್ಳತನ ಅಂದರೆ ಏನು? ಹೌದು, ನಾವು ಕೆಲವು ಮಿಯಾ ಮತಗಳನ್ನು ಕದಿಯಲು ಪ್ರಯತ್ನಿಸುತ್ತಿದ್ದೇವೆ. ನಿಜವಾಗಿ ಅವರಿಗೆ ಅಸ್ಸಾಂನಲ್ಲಿ ಮತ ಚಲಾಯಿಸಲು ಅವಕಾಶ ನೀಡಬಾರದು. ಅವರು ಬಾಂಗ್ಲಾದೇಶದಲ್ಲಿ ಮತ ಚಲಾಯಿಸಬೇಕು" ಎಂದು ಸಿಎಂ ಶರ್ಮಾ ಹೇಳಿದ್ದಾರೆ.

ಅಸ್ಸಾಂನ ತಿನ್ಸುಕಿಯಾ ಜಿಲ್ಲೆಯ ದಿಗ್ಬೋಯ್‌ನಲ್ಲಿ ಮಂಗಳವಾರ (ಜ.27) ನಡೆದ ಸರ್ಕಾರಿ ಕಾರ್ಯಕ್ರಮದಲ್ಲಿ ಶರ್ಮಾ ದ್ವೇಷದ ಹೇಳಿಕೆ ನೀಡಿದ್ದಾರೆ.

# ಮದುವೆ ಜವಾಬ್ದಾರಿಯನ್ನು ಹೆಚ್ಚಿಸುತ್ತದೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಮದುವೆಯು ಮನುಷ್ಯನ ಜವಾಬ್ದಾರಿಯನ್ನು ಹೆಚ್ಚಿಸುತ್ತದೆ. ಜೀವಿತಾವಧಿಯಲ್ಲಿ ಮನುಷ್ಯನಿಗೆ ಸಿಗುವ ಅನೇಕ ಸಂಸ್ಕಾರಗಳಲ್ಲಿ ಮದುವೆಯೂ ಒಂದು ಮತ್ತು ಇದು ಜೀವನದ ಅತ್ಯಂತ ಮಹತ್ವದ ಘಟ್ಟವಾಗಿದೆ ಎಂದು ನರೇಗಲ್ಲ ಹಿರೇಮಠದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಹೇಳಿದರು.

ಕೋಡಿಕೊಪ್ಪದ ಶ್ರೀ ವೀರಪ್ಪಜ್ಜನವರ ಜಾತ್ರಾ ಮಹೋತ್ಸವದ ಮುನ್ನಾ ದಿನ ಜರುಗಿದ ಸಾಮೂಹಿಕ ವಿವಾಹ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಮದುವೆಯಾಗುವುದು ಮುಖ್ಯವಲ್ಲ. ಆದರೆ ನಂತರ ಇಬ್ಬರೂ ಹೊಂದಿಕೊಂಡು ಬಾಳುವೆಯನ್ನು ಸಾಗಿಸುವುದು ಮುಖ್ಯ. ಇಬ್ಬರ ನಡುವಿನ ಹೊಂದಾಣಿಕೆ ಕೆಟ್ಟರೆ ಬದುಕು ಘೋರವಾಗುತ್ತದೆ. ಆದ್ದರಿಂದ ಇಂದು ದಾಂಪತ್ಯ ಜೀವನಕ್ಕೆ ಕಾಲಿಟ್ಟ ನೀವು ಎಂದಿಗೂ ಹೊಂದಾಣಿಕೆಯ ಜೀವನ ನಡೆಸಿ ಸುಖ-ಸಂತೋಷದಿಂದ ಬಾಳಿರಿ ಎಂದರು.

ಜೀವನ ಹೂವಿನ ಹಾಸಿಗೆಯಲ್ಲ. ಕಷ್ಟ-ನಷ್ಟಗಳು ಎದುರಾಗುತ್ತವೆ. ಮನೆಯಲ್ಲಿನ ಹಿರಿಯ ಮಾರ್ಗದರ್ಶನವನ್ನು ಪಡೆದುಕೊಂಡು ಜೀವನದಲ್ಲಿ ಯಾವ ಎಡರು-ತೊಡರುಗಳ ಬಾರದಂತೆ ನಿಮ್ಮ ಜೀವನ ಸಾಗಿಸಿ. ಶ್ರೀ ವೀರಪ್ಪಜ್ಜನವರ ಕೃಪಾಶೀರ್ವಾದದಡಿಯಲ್ಲಿ ನೀವು ದಾಂಪತ್ಯ ಜೀವನಕ್ಕೆ ಕಾಲಿಟ್ಟಿದ್ದೀರಿ. ಶ್ರೀ ವೀರಪ್ಪಜ್ಜನವರು ನಿಮಗೆ ಸಕಲ ಸನ್ಮಂಗಲಗಳನ್ನುಂಟು ಮಾಡುತ್ತಾರೆ ಎಂದರು.

ಶ್ರೀ ವೀರಪ್ಪಜ್ಜನವರ ಟ್ರಸ್ಟ್ ಕಮಿಟಿ ಅಧ್ಯಕ್ಷ ಡಾ. ಮಲ್ಲಯ್ಯ ಚಪ್ಪನ್ನಮಠ ಅಧ್ಯಕ್ಷತೆ ವಹಿಸಿದ್ದರು. ಬಸವರಾಜ ದಿಂಡೂರ, ಎಂ.ಎ. ಹಿರೇವಡೆಯರ ಅತಿಥಿಗಳಾಗಿ ಪಾಲ್ಗೊಂಡಿದ್ದರು. ವೇ.ಮೂ ರುದ್ರಮುನಿಶಾಸ್ತ್ರಿ ಹಿರೇಮಠರು ವಿವಾಹ ಕಾರ್ಯಗಳನ್ನು ನೆರವೇರಿಸಿದರು. ನೂರಾರು ಭಕ್ತರು ನೂತನ ದಂಪತಿಗಳನ್ನು ಆಶೀರ್ವದಿಸಿದರು.

ಸಾಮೂಹಿಕ ವಿವಾಹದಲ್ಲಿ ಐದು ಜೊತೆ ಜೋಡಿಗಳು ನೂತನ ದಾಂಪತ್ಯಕ್ಕೆ ಕಾಲಿರಿಸಿದರು. ಸಮಾರಂಭದಲ್ಲಿ ಟ್ರಸ್ಟ್ ಕಮಿಟಿಯ ಸರ್ವ ಸದಸ್ಯರು ಪಾಲ್ಗೊಂಡಿದ್ದರು.

# ಶ್ರೀ ವೀರಪ್ಪಜ್ಜನವರ ಜಾತ್ರಾ ಮಹೋತ್ಸವ




■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಕೋಡಿಕೊಪ್ಪದ ಶ್ರೀ ಹಠಯೋಗಿ ವೀರಪ್ಪಜ್ಜನವರ ಜಾತ್ರಾ ಮಹೋತ್ಸವದ ಅಂಗವಾಗಿ ಮಹಾರಥೋತ್ಸವವು ಸಹಸ್ರಾರು ಭಕ್ತ ಸಾಗರದ ನಡುವೆ ಅತ್ಯಂತ ಸಡಗರ ಸಂಭ್ರಮದಿಂದ ಬುಧವಾರ ಜರುಗಿತು.

ಬೆಳಿಗ್ಗೆ 6 ಗಂಟೆಗೆ ಕೃರ್ತು ಗದ್ದುಗೆಗೆ ರುದ್ರಾಭಿಷೇಕ, ಮಹಾಪೂಜೆ, ಮಂಗಳಾರಾತಿ ಸೇರಿದಂತೆ ವಿಶೇಷ ಅಭಿಷೇಕ ಜರುಗಿದವು. ಸಂಜೆ 6 ಗಂಟೆಗೆ ನಡೆದ ರಥೋತ್ಸವದಲ್ಲಿ ಆಂಧ್ರ ಪ್ರದೇಶ, ತಮಿಳುನಾಡು, ಉತ್ತರಪ್ರದೇಶ, ಬೆಂಗಳೂರು, ಚಾಮರಾಜನಗರ, ಉಡುಪಿ, ಗದಗ, ಹುಬ್ಬಳ್ಳಿ, ಧಾರವಾಡ, ಬಾಗಲಕೋಟಿ, ಬಳ್ಳಾರಿ, ಹೊಸಪೇಟಿ, ಕೊಪ್ಪಳ, ಯಲಬುರ್ಗಾ, ಕುಕನೂರು, ಕರಮುಡಿ, ಹಾಲಕೆರೆ, ನಿಡಗುಂದಿ, ಗಜೇಂದ್ರಗಡ, ರಾಯಚೂರ, ಯಾದಗೇರಿ, ನರೇಗಲ್ಲ, ಅಬ್ಬಿಗೇರಿ, ಕೋಚಲಾಪೂರ, ತೋಟಗಂಟಿ, ಮಲ್ಲಾಪೂರ, ದ್ಯಾಂಪೂರ, ಕುರುಡಗಿ, ಯರೇಬೇಲೇರಿ, ಡ.ಸ. ಹಡಗಲಿ, ಗುಜಮಾಗಡಿ, ನಾಗರಾಳ, ತೋಡಿಹಾಳ, ಬಂಡಿಹಾಳ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ರೈತರು ತಮ್ಮ ಟ್ರ್ಯಾಕ್ಟರ್ ಹಾಗೂ ಚಕ್ಕಡಿ, ದ್ವಿಚಕ್ರ ವಾಹನ, ಕಾರ್ ಸೇರಿದಂತೆ ಇತರೆ ವಾಹನಗಳಲ್ಲಿ ಆಗಮಿಸಿದ್ದರು.

ತೇರಿನ ಹಗ್ಗವು ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲೂಕಿನ ಸಿದ್ದೇಕೊಪ್ಪದಿಂದ ಭಜನೆ, ಡೊಳ್ಳು, ಕಹಳೆಗಳ ಹಾಗೂ ವಿವಿಧ ವಾದ್ಯಗಳೊಂದಿಗೆ ಆಗಮಿಸಿತು. ರಥದ ಕಳಸವು ಸಂಕನಗೌಡ್ರ ಮನೆಯಿಂದ ಮೆರವಣಿಗೆ ಮೂಲಕ ವೀರಪ್ಪಜ್ಜನ ಮಠವನ್ನು ತಲುಪಿತು. ತೇರು ಬೇವಿನ ಗಿಡದ ಪಾದಗಟ್ಟಿವರೆಗೆ ತಲುಪಿ ಮರಳಿ ಮೂಲಸ್ಥಳಕ್ಕೆ ತಲುಪಿತು. ಜಾತ್ರೆಯಲ್ಲಿ ರಾಜ್ಯದ ವಿವಿಧ ಭಾಗಗಳಿಂದ 30 ಸಾವಿರಕ್ಕೂ ಅಧಿಕ ಭಕ್ತರು ಭಾಗಿಯಾಗಿದ್ದರು.

ಇತ್ತೀಚೆಗೆ ತುಮಕೂರಿನಲ್ಲಿ ನಡೆದ ಕರ್ನಾಟಕ ಕ್ರೀಡಾಕೂಟ 2025-26ರಲ್ಲಿ ಗದಗ ನಗರದ ವಿಡಿಎಸ್‌ಟಿ ಗರ್ಲ್ಸ್ ಕಾಲೇಜಿನ ವಿದ್ಯಾರ್ಥಿನಿ ವರಲಕ್ಷ್ಮೀ ರಾಜು ಕದಡಿ 55 ಕೆ.ಜಿ. ವಿಭಾಗದ ಕುಸ್ತಿಯಲ್ಲಿ ದ್ವಿತಿಯ ಸ್ಥಾನ ಪಡೆದಿದ್ದಾರೆ. ಸಾಧಕ ವಿದ್ಯಾರ್ಥಿನಿಗೆ ಆಡಳಿತ ಮಂಡಳಿ ಹಾಗೂ ಪಾಲಕರು ಅಭಿನಂದಿಸಿದ್ದಾರೆ.





## ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ

ಪಿನ್ ಕೋಡ್ ನಂ. 582101. ದೂರವಾಣಿ: 08372-278003.
ಇ-ಮೇಲ್: uda_gadag@hotmail.com

ಸಂ: ನಅಪ್ರಾಗಬೆ/ಭೂಬ-(14)/2025-26/1298 ದಿನಾಂಕ: 27.01.2026

**ಪ್ರಕಟಣೆ**

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ **ಅಧ್ಯಕ್ಷರು ಜೈನ್ ಫೌಂಡೇಶನ್ ರಿ: ಧಾರವಾಡ** ಸಾ॥ ಗದಗ ಈ ಕೆಳಕಂಡ ಜಮೀನನ್ನು ಭೂ ಉಪಯೋಗ ನಿಗಧಿಪಡಿಸಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂ ಉಪಯೋಗ ನಿಗಧಿಪಡಿಸುವದರಿಂದ ಸ್ಥಳದಲ್ಲಿ ವಸತಿ ನಿವೇಶನಗಳನ್ನು ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ಅರ್ಜಿದಾರರಿಗೆ ಹಾಗೂ ಸಾರ್ವಜನಿಕರಿಗೆ ವಸತಿ ನಿವೇಶನಗಳು ಸಿಗುತ್ತವೆ. ಇದರಿಂದ ನಗರದಲ್ಲಿ ವಸತಿ ಸಮಸ್ಯೆ ಸ್ವಲ್ಪ ಬಗೆ ಹರಿಯುತ್ತದೆ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ **ಯೋಜನಾ ಕಾಯ್ದೆ 1961 ರ ಕಲಂ 69(3) ರಂತೆ** ಭೂ ಉಪಯೋಗ ನಿಗದಿಪಡಿಸುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ **15 (ಹದಿನೈದು)** ದಿನಗಳೊಳಗಾಗಿ ಆಯುಕ್ತರು, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ-582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ. ನ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗಧಿಪಡಿಸಿದ ಭೂ ಉಪಯೋಗ | ಅರ್ಜಿದಾರರು ಬಯಸಿರುವ ಭೂ ಉಪಯೋಗ ಬದಲಾವಣೆ |
|---|---|---|---|---|---|
| 01 | ಗದಗ | 114/*/1+2+3/ಡ | 13ಎಕರೆ-19ಗುಂಟೆ | ಸಾರಿಗೆ ಮತ್ತು ಸಂಪರ್ಕ (Transport & Communication) | ವಸತಿ |

ಸಹಿ/- ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ, ಗದಗ-ಬೆಟಗೇರಿ

ವಾ.ಸಾ.ಇ/ಗದಗ/585/ದೇಶಪಾಂಡೆಪಬ್ಲಿಸಿಟಿ/2025-26



## ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ

ಪಿನ್ ಕೋಡ್ ನಂ. 582101. ದೂರವಾಣಿ: 08372-278003.
ಇ ಮೇಲ್: uda_gadag@hotmail.com

ಸಂ: ನಅಪ್ರಾಗಬೆ/ಭೂಬ/2025-26/1291 ದಿನಾಂಕ: 27-01-2026

**ಪ್ರಕಟಣೆ**

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ **ಶ್ರೀ ವಿಜಯ ತಗತ್ರಾಜ ಬಿದಾಮಿಯಾ ಹಾಗೂ ಇತರರು ಸಾ॥ ಗದಗ** ಈ ಕೆಳಕಂಡ ಜಮೀನನ್ನು ಭೂ ಉಪಯೋಗ ಬದಲಾವಣೆ ಮಾಡಲುಅರ್ಜಿ ಸಲ್ಲಿಸಿರುತ್ತಾರೆ. ಈ ಭೂ ಉಪಯೋಗ ಬದಲಾವಣೆಯಿಂದ ಸ್ಥಳದಲ್ಲಿ ವಸತಿ ನಿವೇಶನಗಳನ್ನು ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ಅರ್ಜಿದಾರರಿಗೆ ಹಾಗೂ ಸಾರ್ವಜನಿಕರಿಗೆ ವಸತಿ ನಿವೇಶನಗಳು ಸಿಗುತ್ತವೆ. ಇದರಿಂದ ನಗರದಲ್ಲಿ ವಸತಿ ಸಮಸ್ಯೆ ಸ್ವಲ್ಪ ಬಗೆಹರಿಯುತ್ತದೆ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ **ಯೋಜನಾ ಕಾಯ್ದೆ 1961 ರ ಕಲಂ 14(ಎ)**ರಂತೆ ಭೂ ಉಪಯೋಗ ಬದಲಾವಣೆ ಮಾಡುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ 15 (ಹದಿನೈದು) ದಿನಗಳೊಳಗಾಗಿ ಆಯುಕ್ತರು, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ-582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ. ನ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗಧಿಪಡಿಸಿದ ಭೂ ಉಪಯೋಗ | ಅರ್ಜಿದಾರರು ಬಯಸಿರುವ ಭೂ ಉಪಯೋಗ ಬದಲಾವಣೆ |
|---|---|---|---|---|---|
| 1. | ಅಡವಿ ಸೋಮಾಪುರ | 163/*/1 | 04ಎಕರೆ-06ಗುಂಟೆ ಪೈಕಿ 00ಎ-01ಗುಂಟೆ 'ಅ' ಖರಾಬು, 00ಎ-02ಗುಂಟೆ 'ಬ' ಖರಾಬು ಹಾಗೂ ಭೂ ಸ್ವಾಧೀನವಾದ ಕ್ಷೇತ್ರ 01ಎಕರೆ - 07ಗುಂಟೆ ಹೊರತುಪಡಿಸಿ ಉಳಿದ ಕ್ಷೇತ್ರ: 02ಎಕರೆ-36ಗುಂಟೆ | ಕೃಷಿ | ವಸತಿ |
| | | 163/*/2 | 04ಎಕರೆ-06ಗುಂಟೆ ಪೈಕಿ 00ಎ-01ಗುಂಟೆ 'ಅ' ಖರಾಬು, 00ಎ-02ಗುಂಟೆ 'ಬ' ಖರಾಬು ಹೊರತುಪಡಿಸಿ ಉಳಿದ ಕ್ಷೇತ್ರ: 04ಎಕರೆ-03ಗುಂಟೆ | | |
| | ಒಟ್ಟು ಕ್ಷೇತ್ರ: | | 06ಎಕರೆ-39ಗುಂಟೆ | | |

ಸಹಿ/- ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ, ಗದಗ-ಬೆಟಗೇರಿ

ವಾ.ಸಾ.ಇ/ಗದಗ/581/ದೇಶಪಾಂಡೆಪಬ್ಲಿಸಿಟಿ/2025-26


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka